ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೯

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**

**ಮಂಗಳವಾರ, ದಿನಾಂಕ : ೦೨ನೇ ಫೆಬ್ರವರಿ, ೨೦೨೧**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ಸಕ್ಕರೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

೭. ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

---

## ಬೀದರ್ ನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯ (೨೧೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸಭೆ ವ್ಯಾಪ್ತಿಯ ಎಲ್ಲಾ ೩೫ ವಾರ್ಡ್‌ಗಳಲ್ಲಿ ದಿನದ ೨೪ ಗಂಟೆ ಕುಡಿಯುವ ನೀರು ಪೂರೈಕೆ ಯೋಜನೆ ಆರಂಭವಾಗಿದೆಯೇ ;

(ಆ) ಈ ಯೋಜನೆಗಾಗಿ ಸರ್ಕಾರ ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಿದೆ ; ಇನ್ನೂ ಎಷ್ಟು ಕಾಮಗಾರಿ ಬಾಕಿ ಇದೆ ; ಕಾಮಗಾರಿ ಯಾವ ಏಜೆನ್ಸಿಗೆ ನೀಡಲಾಗಿದೆ ;

(ಇ) ಯೋಜನೆ ಕಾಮಗಾರಿ ಕಳಪೆಯಾಗಿರುವುದರಿಂದ ಅನೇಕ ಕಡೆ ಪೈಪುಗಳು ಒಡೆದು ನೀರು ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬೀದರ್ ಜಿಲ್ಲೆಯಲ್ಲಿ ಅನ್ನ ಭಾಗ್ಯ ಯೋಜನೆಯಲ್ಲಿ ನಡೆಯುತ್ತಿರುವ ಅವ್ಯವಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦ (೨೧೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಡವರ ಹಸಿವು ನೀಗಿಸಲು ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರ ವಿತರಿಸುತ್ತಿರುವ ಅಪಾರ

ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅನ್ನ ಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್., ಹಾಗೂ ಎ.ಪಿ.ಎಲ್., ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್‌ಗಟ್ಟಲೆ ಉಳಿಕೆಯಾಗುತ್ತಿದ್ದು, ಕೆಲವು ಅಧಿಕಾರಿಗಳು ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ;

(ಇ) ಈ ಕ್ರಮವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಈ) ಸುಳ್ಳು ಲೆಕ್ಕ ತೋರಿಸಿ ಕಾಳ ಸಂತೆಯಲ್ಲಿ ಅನ್ನ ಭಾಗ್ಯದ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿಗಳ ಅಂಗಡಿ ಮಾಲೀಕರ ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ? (ಸ್ಪಷ್ಟ ವಿವರ ನೀಡುವುದು)

## ಬೀದರ್ ಜಿಲ್ಲೆಯ ಕೈಗಾರಿಕಾ ಪ್ರದೇಶದಲ್ಲಿ ಹಾಗೂ ಜಿಲ್ಲೆಯಲ್ಲಿ ಬಂಡವಾಳ ಹೂಡಿಕೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೧ (೨೧೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಯಲ್ಲಿ ೧೦ ವರ್ಷದಲ್ಲಿ ರಾಜ್ಯ ಉನ್ನತ ಮಟ್ಟದ ಸಮಿತಿಯು ೭ ಯೋಜನೆಗಳಿಗೆ ಮಂಜೂರಾತಿ ನೀಡಿದ್ದು, ಅವುಗಳಲ್ಲಿ ૩

ಯೋಜನೆಗಳು ಕಾರ್ಯರಂಭವಾಗಿದ್ದು ೦೧ ಯೋಜನೆಯು ಕಾರ್ಯ ಪ್ರಗತಿಯಲ್ಲಿದ್ದು ಉಳಿದ ೩ ಯೋಜನೆಗಳು ಅನುಷ್ಠಾನದಿಂದ ಹೊರಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಜಿಲ್ಲೆಯಲ್ಲಿ ಬಂಡವಾಳ ಆಕರ್ಷಿಸಲು ಕಾಂಪಿಟ್ ವಿತ್ ಚೈನಾ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಯನ್ನು ಕೃಷಿ ಉತ್ಪನ್ನ ಉಪಕರಣಗಳ ಉತ್ಪಾದನಾ ವಲಯವನ್ನಾಗಿ ಘೋಷಿಸಿದ್ದರೂ ಇಲ್ಲಿಯವರೆಗೆ ಯಾವುದೇ ಪ್ರಗತಿ ಕಂಡು ಬಂದಿಲ್ಲದಿರುವುದರಿಂದ ಈ ಯೋಜನೆಯು ಯಾವ ಹಂತದಲ್ಲಿದೆ; ( ವಿವರ ನೀಡುವುದು)

(ಇ) ಜಿಲ್ಲೆಗೆ ರಾಜ್ಯ ಏಕಗವಾಕ್ಷಿ ಸಮಿತಿಯು ಕಳೆದ ೧೦ ವರ್ಷಗಳಲ್ಲಿ ೫೬ ಯೋಜನೆಗಳಿಗೆ ಮಂಜೂರಾತಿ ನೀಡಿದ್ದು, ಅವುಗಳಲ್ಲಿ ೨೩ ಘಟಕಗಳು ಕಾರ್ಯಾರಂಭ ಮಾಡಿದ್ದು, ಇವುಗಳಲ್ಲಿ ೨೬೦.೭೧ ಬಂಡವಾಳ ಹೂಡಿಕೆಯಾಗಿದ್ದು, ೧೮ ಯೋಜನೆಗಳು ಅನುಷ್ಠಾನದ ಹಂತದಲ್ಲಿದ್ದು ಉಳಿದ ೧೬ ಯೋಜನೆಗಳು ಅನುಷ್ಠಾನದಿಂದ ಹಿಂದೆ ಸರಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯ ಸಹಕಾರ ಇಲಾಖೆಯಿಂದ ವಿವಿಧ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೨ (೨೧೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಕಾರ ಇಲಾಖೆಯಲ್ಲಿರುವ ವಿವಿಧ ಯೋಜನೆಗಳಾವುವು; (ಯೋಜನೆವಾರು ಮಾಹಿತಿ ನೀಡುವುದು)

(ಆ) ಕಳೆದ ಒಂದು ವರ್ಷದಿಂದ ಜಿಲ್ಲೆಯಲ್ಲಿ ಯಾವ್ಯಾವ ಯೋಜನೆಗಳಿಂದ ಎಷ್ಟೆಷ್ಟು ಫಲಾನುಭವಿಗಳು ಯಾವ ಯಾವ ಸೌಲಭ್ಯವನ್ನು ಪಡೆದಿದ್ದಾರೆ? (ಯೋಜನೆವಾರು, ತಾಲ್ಲೂಕುವಾರು ಫಲಾನುಭವಿವಾರು ವಿವರ ನೀಡುವುದು)

## ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಗತ್ಯ ಮೂಲ ಸೌಕರ್ಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೩ (೭೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲು ಇಲಾಖೆ ಯಾವ ಕ್ರಿಯಾ ಯೋಜನೆ ರೂಪಿಸಿದೆ ವಿವರವಾದ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು ;

(ಆ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಅಗತ್ಯ ಮೂಲ ಸೌಕರ್ಯಗಳಿಲ್ಲದೆ ದಿನನಿತ್ಯ ರೈತರು ಮತ್ತು ವರ್ತಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವುಗಳನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಾಗಮಂಗಲ ಎ.ಪಿ.ಎಂ.ಸಿ ಯಲ್ಲಿ ಶೌಚಾಲಯ, ವೇ ಬ್ರಿಡ್ಜ್ ಹಾಗೂ ಇತರೆ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿದ್ದು ಇವುಗಳನ್ನು ರೈತರು ಮತ್ತು ವರ್ತಕರು ಬಳಸದಂತಹ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಗಿದ್ದಲ್ಲಿ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರು ಮತ್ತು ಇಲಾಖಾ ಮುಖ್ಯಸ್ಥರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೪ (೭೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳೆಷ್ಟು ; ಇಂತಹ ಪ್ರಕರಣಗಳ ವಿರುದ್ಧ ಇಲಾಖೆ ಅಥವಾ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಅ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಿಗೆ ಈವರೆಗೆ ದಂಡ ವಿಧಿಸಲಾಗಿದೆ ; (ಪ್ರತಿಗಳನ್ನು ನೀಡುವುದು) ಅತಿಕ್ರಮಣ ಮಾಡಿರುವ ಪ್ರದೇಶವನ್ನು ಸರ್ಕಾರ ವಾಪಸ್ ಪಡೆಯಲು ತೆಗೆದುಕೊಂಡ ಕ್ರಮಗಳೇನು ; ತಪ್ಪಿತಸ್ಥ ಇಲಾಖಾ ಅಧಿಕಾರಿಗಳು ಮತ್ತು ಗಣಿಗಾರಿಕೆ

ನಡೆಸುತ್ತಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?
(ಸಂಪೂರ್ಣ ವಿವರ ನೀಡುವುದು)

## ಸುರಕ್ಷಿತ ಗಣಿ ಕೈಗಾರಿಕಾ ವಲಯದಲ್ಲಿ ಅನಧಿಕೃತವಾಗಿ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೫ (೭೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಹೊಣಕೆರೆ ಹೋಬಳಿ ಗಂಗಸಮುದ್ರ ಗ್ರಾಮದ ವ್ಯಾಪ್ತಿಯಲ್ಲಿ ಸರ್ವೆ ನಂ. ೧೪೩ರಲ್ಲಿ ೨೦೧೩–೧೪ ಸಾಲಿನಲ್ಲಿ ೬೫ ಎಕರೆ ಭೂಮಿಯನ್ನು ಸುರಕ್ಷಿತ ಗಣಿ ಕೈಗಾರಿಕಾ ವಲಯದಲ್ಲಿ ಮೀಸಲಿಟ್ಟ ಪ್ರದೇಶ ೪(೧) ಆಗಿರುವಂತಹ ಪ್ರದೇಶದಲ್ಲಿ ಅನಧಿಕೃತವಾಗಿ ಗಣಿಗಾರಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಷರ್ ಮಾಲೀಕರು ಮತ್ತು ಸಂಬಂಧ ಪಟ್ಟ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; (ವಿವರವಾದ ಮಾಹಿತಿಯನ್ನು ನೀಡುವುದು ; ಗಂಗಸಮುದ್ರ ಎಲ್ಲೆ ಸರ್ವೆ ನಂ. ೧೪೩ರ ೬೫ ಎಕರೆ ಭೂ ಸುರಕ್ಷತಾಲಯಕ್ಕೆ ಮೀಸಲಿಟ್ಟಿರುವ ೪(೧) ಪ್ರತಿಯನ್ನು ಒದಗಿಸುವುದು)

(ಆ) ಸುತ್ತಮುತ್ತಲ ಗ್ರಾಮಗಳ ಗೊಲ್ಲರಹಳ್ಳಿ ಬಂಕಾಪುರ ಪಡುವಲ ಪಟ್ಟಣ ಗ್ರಾಮಗಳ ಜನರಿಗೆ ಈ ಅಕ್ರಮ ಗಣಿಗಾರಿಕೆಯಿಂದ ಮನೆಗಳು ಶಿಥಿಲಗೊಂಡಿರುವುದು ಹಾಗೂ ಮುಖ್ಯ ರಸ್ತೆಗಳು ಹದಗೆಟ್ಟಿರುವ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಾರ್ವಜನಿಕರು

ದೂರು ನೀಡಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಸರ್ಕಾರ ಗಣಿ ಬಾಧಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬ (೭೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಗಣಿಗಾರಿಕೆ ಮಾಡಲು ಸರ್ಕಾರದಿಂದ ಎಷ್ಟು ಗಣಿ ಪ್ರದೇಶಗಳನ್ನು ಗುರುತಿಸಿದೆ. ಅವು ಯಾವುವು; ಈ ಪ್ರದೇಶಗಳಲ್ಲಿ ಗಣಿಗಾರಿಕೆ ಮಾಡಲು ಯಾವ ಯಾವ ಕ್ರಷರ್‌ಗಳಿಗೆ ಎಷ್ಟು ವರ್ಷಗಳಿಂದ ಪರವಾನಿಗೆ ನೀಡಲಾಗಿದೆ ; ಹಾಗೂ ಈ ಪರವಾನಿಗೆ ಇನ್ನೂ ಎಷ್ಟು ಕಾಲಾವಧಿ ಇರುತ್ತದೆ ; (ಈ ಕ್ರಷರ್‌ಗಳ ಮಾಲೀಕರು ಮತ್ತು ಅವರ ವಿಳಾಸ ನೀಡುವುದು)

(ಆ) ಸರ್ಕಾರ ಗಣಿ ಬಾಧಿತ ರಸ್ತೆಗಳು ಮತ್ತು ಪ್ರದೇಶಗಳ ಅಭಿವೃದ್ಧಿಗೆ ಯಾವ ಯೋಜನೆ ರೂಪಿಸಿದೆ ;

(ಇ) ಕಳೆದ ಮೂರು ವರ್ಷಗಳಿಂದ ಯಾವ ಯಾವ ಗಣಿ ಬಾಧಿತ ರಸ್ತೆಗಳನ್ನು ಮತ್ತು ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಅನುದಾನ ನೀಡಲಾಗಿದೆ ;

(ಈ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಗಣಿ ಬಾಧಿತ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅನುದಾನ ನೀಡಲಾಗಿದೆಯೇ ;

(ಉ) ನೀಡಿದ್ದಲ್ಲಿ, ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ಯಾವ ಯಾವ ರಸ್ತೆಗಳನ್ನು ಅನುದಾನ ನೀಡಿ ಅಭಿವೃದ್ಧಿಗೊಳಿಸಲಾಗಿದೆ ? (ತಾಲ್ಲೂಕುವಾರು ಹಂಚಿಕೆ ಅನುದಾನದ ಮಾಹಿತಿ ನೀಡುವುದು)

## ಅಡುಗೆ ಅನಿಲ ಸಂಪರ್ಕವನ್ನು ಪಡೆದಿರುವ ಫಲಾನುಭವಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭ (೭೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ೦೭ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಅಡುಗೆ ಅನಿಲ ಸಂಪರ್ಕವನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಂಪರ್ಕವನ್ನು ಹಂಚಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಬಾಕಿಯಿರುವ ಅರ್ಜಿಗಳನ್ನು ಎಷ್ಟು ದಿನಗಳಲ್ಲಿ ವಿಲೇವಾರಿ ಮಾಡಲಾಗುವುದು, ಅಡುಗೆ ಅನಿಲ ಸಂಪರ್ಕವನ್ನು ನೀಡಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು ; ಈ ಅಡುಗೆ ಅನಿಲ ಸಂಪರ್ಕವನ್ನು ಪಡೆಯಲು ಬಾಕಿ ಇದರ ಪ್ರಕರಣದಲ್ಲಿ ಎಷ್ಟು ದಿನದೊಳಗೆ ವಿತರಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ತ್ಯಾಜ್ಯ ವಸ್ತುಗಳ ನಿರ್ವಹಣೆ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೬೮ (೨೨೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ನಗರಗಳಲ್ಲಿ ತ್ಯಾಜ್ಯ ವಸ್ತುಗಳ ನಿರ್ವಹಣಾ ವ್ಯವಸ್ಥೆಗಳನ್ನು ನಿರ್ವಹಿಸುತ್ತಿರುವ ಪದ್ಧತಿಗಳಾವುವು ;

(ಆ) ನಗರಗಳ ವಿಸ್ತರಣೆಯಿಂದ ತ್ಯಾಜ್ಯ ಸಂಗ್ರಹ ಮತ್ತು ವಿಸರ್ಜನೆಗೆ ಗುರುತಿಸುತ್ತಿರುವ ಸ್ಥಳಗಳ ಸುಧಾರಣೆ ಬಗ್ಗೆ ಸರ್ಕಾರ ಯಾವ ಸುಧಾರಿತ ಕ್ರಮಗಳನ್ನು ಅನುಸರಿಸುತ್ತಿದೆ ;

(ಇ) ಈ ಕುರಿತು ಬೆಂಗಳೂರಿನ ಅನುಭವಗಳಿಂದ ಕಲಿತಿರುವ ಪಾಠಗಳೇನು ; ಇದರ ಬಗ್ಗೆ ಸುಧಾರಣಾ ಕ್ರಮಗಳೇನು ?

## ಸಹಕಾರ ಲೆಕ್ಕಪರಿಶೋಧನ ಕಾರ್ಯವಿಧಾನ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೧೬೯ (೨೨೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಲೆಕ್ಕಪರಿಶೋಧನಾ ಇಲಾಖೆಯಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಸಿಗುತ್ತಿರುವ ಆರ್ಥಿಕ ಹೊರೆ ಎಷ್ಟು ;

(ಆ) ವೈದ್ಯನಾಥನ್ ಸಮಿತಿ ವರದಿ ಜಾರಿ ಮುನ್ನ ಸರ್ಕಾರಿ ಇಲಾಖೆಯಿಂದ ಸಂಗ್ರಹವಾಗುತ್ತಿದ್ದ ಆಡಿಟ್ ಶುಲ್ಕ ಎಷ್ಟು ; (ವರ್ಷವಾರು ವಿವರ ಒದಗಿಸುವುದು)

(ಇ) ಪ್ರಸ್ತುತವಾಗಿ ಸಹಕಾರ ಲೆಕ್ಕ ಪರಿಶೋಧನಾ ಇಲಾಖೆ ನಿರ್ವಹಿಸುತ್ತಿರುವ ಕಾರ್ಯಗಳಿಗೆ ಹೋಲಿಸಿದ್ದಲ್ಲಿ ಇರುವ ಸಿಬ್ಬಂದಿಗಳ ಸಂಖ್ಯೆ ಅತೀ ಹೆಚ್ಚಾಗಿಲ್ಲವೇ ;

(ಈ) ಈ ಬಗ್ಗೆ ಶ್ರೀನಿವಾಸಮೂರ್ತಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಆಡಳಿತಾತ್ಮಕ ಸುಧಾರಣಾ ಆಯೋಗ ನೀಡಿರುವ ಶಿಫಾರಸ್ಸನ್ನು ಕೂಡಲೇ ಜಾರಿಗೆ ತರಲು ಸರ್ಕಾರದಿಂದ ವಿಳಂಬವಾಗುತ್ತಿರಲು ಕಾರಣವೇನು ; ಈ ಬಗ್ಗೆ ತುರ್ತಾಗಿ ಸರ್ಕಾರ ನಿರ್ಧಾರ ಕೈಗೊಂಡು ಸಿಬ್ಬಂದಿಗಳನ್ನು ಲೆಕ್ಕ ಇಲಾಖೆಗೆ ನೀಡಲು ಸರ್ಕಾರ ಅನುಸರಿಸುವ ವಿಧಿವಿಧಾನಗಳೇನು ?

## ತೋಟಗಾರಿಕೆ ಅಭಿವೃದ್ಧಿ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦ (೧೯೩) ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ತೋಟಗಾರಿಕೆ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ; ಹಾಗೂ ಇದಕ್ಕಾಗಿ ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ ; ಎಷ್ಟು ಖರ್ಚು ಮಾಡಲಾಗಿದೆ ;

(ಆ) ಕಳೆದ ೨ ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ ; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ; ಎಷ್ಟು ಜನ ರೈತರಿಗೆ ಇದರಿಂದ ಪ್ರಯೋಜನವಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## "ಉಜ್ವಲ" ಇಂಧನ ಯೋಜನೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧ (೧೯೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ "ಉಜ್ವಲ" ಇಂಧನ ಯೋಜನೆಯಡಿ ಬಿ.ಪಿ.ಎಲ್. ಕುಟುಂಬಗಳಿಗೆ ಅಡುಗೆ ಅನಿಲ ನೀಡಲಾಗಿದೆಯೇ ; ಇದಕ್ಕಾಗಿ ಎಷ್ಟು ಅರ್ಜಿಗಳು ಬಂದಿದ್ದವು ; ಎಷ್ಟು ಜನರಿಗೆ ಅಡುಗೆ ಅನಿಲ ನೀಡಲಾಗಿದೆ ; ಇನ್ನೂ ಎಷ್ಟು ಜನರಿಗೆ ನೀಡಬೇಕಾಗಿದೆ ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಆ) "ಉಜ್ವಲ" ಇಂಧನ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಲಾಗುವ ಮಾನದಂಡಗಳೇನು ?

## ಜೋಯಿಡಾದಲ್ಲಿ ಭತ್ತ ಖರೀದಿ ಕೇಂದ್ರ ಸ್ಥಾಪನೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨ (೨೩೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರೈತರ ಆದಾಯದ ಮೂಲವಾದ ಭತ್ತದ ಖರೀದಿ ಕೇಂದ್ರವು ಇಲ್ಲದೆ ಇರುವುದರಿಂದ ದೂರದ ಹಳಿಯಾಳ ಪಟ್ಟಣದಲ್ಲಿ ಭತ್ತ ಖರೀದಿ ಕೇಂದ್ರಕ್ಕೆ

ಹೋಗಲು ಆಗದೆ ಬೆಳೆದ ಭತ್ತಕ್ಕೆ ಬೆಂಬಲ ಬೆಲೆ ಸಿಗದೆ ದಲ್ಲಾಳಿಗಳಿಂದ ರೈತರು ಮೋಸ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ರೀತಿ ಭತ್ತದ ಖರೀದಿ ಕೇಂದ್ರ ಜೋಯಿಡಾದಲ್ಲಿ ಇಲ್ಲದೆ ಇರುವುದರಿಂದ ಸಂಕಷ್ಟದಲ್ಲಿರುವ ರೈತರ ಹಿತ ದೃಷ್ಟಿಯಿಂದ ಸರ್ಕಾರ ಕೂಡಲೇ ಜೋಯಿಡಾದಲ್ಲಿ ಮತ್ತು ರಾಮನಗರದಲ್ಲಿ ಭತ್ತದ ಖರೀದಿ ಕೇಂದ್ರ ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೆ ; ಹಾಗಾದರೆ, ಸರ್ಕಾರಕ್ಕೆ ಸದರಿ ಭತ್ತದ ಖರೀದಿ ಕೇಂದ್ರ ಪ್ರಾರಂಭಿಸಲು ಬೇಕಾಗುವ ಕಾಲಾವಕಾಶ ಎಷ್ಟು ? (ವಿವರ ನೀಡುವುದು)

## ಮರಳು ನಿಕ್ಷೇಪಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೩ (೮೦) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಗುರುತಿಸಲಾಗಿದೆ ; ಇವುಗಳಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಹರಾಜು ಮುಖಾಂತರ ವಿಲೇವಾರಿ ಮಾಡಲಾಗಿದೆ ; ಇವುಗಳನ್ನು ಹರಾಜಿನಲ್ಲಿ ಪಡೆದ ಗುತ್ತಿಗೆದಾರರು ಯಾರು ; (ಕಳೆದ ೩ ವರ್ಷಗಳ ನಿಕ್ಷೇಪವಾರು ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಅಕ್ರಮ ಮರಳು ದಾಸ್ತಾನು ಪ್ರಕರಣಗಳು ಬೆಳಕಿಗೆ ಬಂದಿವೆಯೇ ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ಮರಳನ್ನು ಅಕ್ರಮವಾಗಿ ಸಂಗ್ರಹಿಸಲಾಗಿತ್ತು ; ಯಾರು ಸಂಗ್ರಹಿಸಿದ್ದಾರೆ ;

ಇದಕ್ಕೆ ವಿಧಿಸಿರುವ ದಂಡವೆಷ್ಟು ; (ಕಳೆದ ೩ ವರ್ಷಗಳ ಪ್ರಕರಣವಾರು ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಅಕ್ರಮ ಮರಳು ದಾಸ್ತಾನುದಾರರ ವಿರುದ್ಧ ಮತ್ತು ಅಕ್ರಮ ಮರಳು ದಾಸ್ತಾನು ಮಾಡದಂತೆ ತಡೆಯಲು ವಿಫಲರಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ಪ್ರಕರಣವಾರು ಮಾಹಿತಿ ನೀಡುವುದು ; ಅಕ್ರಮ ಮರಳು ದಾಸ್ತಾನು ಮಾಡುವುದನ್ನು ತಡೆಗಟ್ಟಲು ಸರ್ಕಾರವು ವಹಿಸಿರುವ ಮುಂಜಾಗ್ರತಾ ಕ್ರಮಗಳೇನು ? (ವಿವರ ನೀಡುವುದು)

## ತೋಟಗಾರಿಕೆ ಇಲಾಖೆ ಯೋಜನೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪ (೮೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಯಾವ ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ ; ಹಾಸನ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು ; ಈ ಪ್ರದೇಶಗಳಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ತೋಟಗಾರಿಕಾ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳಿಗಾಗಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾದ ಅನುದಾನವೆಷ್ಟು ; ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಶೀತಲೀಕರಣ ಸಂಗ್ರಹಗಾರಗಳ ನಿರ್ಮಾಣ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಫಲಾನುಭವಿಗಳಿಗೆ ವಿತರಿಸಿರುವ ಅನುದಾನವೆಷ್ಟು ಮತ್ತು ಫಲಾನುಭವಿಗಳ ವಿವರಗಳೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ನಂದಿನಿ ಪಾರ್ಲರ್ ಬೂತ್‌ಗಳ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೭೫ (೨೨೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ನಂದಿನಿ ಬೂತ್‌ಗಳು ಎಷ್ಟು; ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಒಟ್ಟು ಬೂತ್‌ಗಳು ಎಷ್ಟು ;

(ಆ) ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಂದಿನಿ ಪಾರ್ಲರ್/ ನಂದಿನಿ ಬೂತ್‌ಗಳ ಫ್ರಾಂಚೈಸಿಯನ್ನು ಪಡೆಯುವುದು ಹೇಗೆ ; ಅದಕ್ಕೆ ಇರುವ ಮಾನದಂಡಗಳೇನು ; ಫ್ರಾಂಚೈಸಿಯನ್ನು ಪಡೆಯುವವರಿಗೆ ಸಿಗುವ ಸೌಲಭ್ಯಗಳೇನು ;

(ಇ) ಎಷ್ಟು ಕಿ.ಮೀ. ಗೆ ಒಂದರಂತೆ ನಂದಿನಿ ಬೂತ್‌ಗಳನ್ನು ಸ್ಥಾಪಿಸಬಹುದು ಇದಕ್ಕೆ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿರುವ ಮಾನದಂಡಗಳೇನು ?

## ಗುಬ್ಬಿ ಪಟ್ಟಣದ ಮಾರನಕಟ್ಟೆ ಜಾಗದ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):–**

೧೭೬ (೨೨೦) ಮಾನ್ಯ ಪೌರಾಡಳಿತ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ಗುಬ್ಬಿ ಪಟ್ಟಣ ಪಂಚಾಯ್ತಿ ಹೊಂದಿರುವ ಜನಸಂಖ್ಯೆ ಎಷ್ಟು; ವಾರ್ಡುಗಳ ಸಂಖ್ಯೆ ಎಷ್ಟು ; ಪಟ್ಟಣ ಪಂಚಾಯ್ತಿಯ ಸರಹದ್ದು ಎಲ್ಲಿಯವರೆಗೆ ಇದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಗುಬ್ಬಿ ಪಟ್ಟಣ ಪಂಚಾಯ್ತಿಯಲ್ಲಿ ಮಾರನಕಟ್ಟೆ ಕೆರೆ ಇದೆಯೇ; ಹಾಗಿದ್ದರೆ, ಇದರ ವಿಸ್ತೀರ್ಣವೆಷ್ಟು ; ಇದಕ್ಕೆ ಮಾಲೀಕರು ಯಾರು ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಮಾರನಕಟ್ಟೆ ಜಾಗವನ್ನು ಸರ್ಕಾರವು ಯಾವ ಯಾವ ಸಂಸ್ಥೆಗಳಿಗೆ ಗುತ್ತಿಗೆ/ ಕ್ರಯಕ್ಕೆ ನೀಡಲಾಗಿದೆ ; (ವಿವರವಾಗಿ ಸಂಸ್ಥೆಯ ಹೆಸರು, ಗುತ್ತಿಗೆ/ಕ್ರಯ ನೀಡಿದ ವರ್ಷ ಹಾಗೂ ವಿಸ್ತೀರ್ಣದೊಂದಿಗೆ ಸರ್ಕಾರಿ ಆದೇಶ ಪ್ರತಿಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಈ) ಇದರಲ್ಲಿ ಖಾಲಿ ಉಳಿದಿರುವ ಜಾಗ ಎಷ್ಟು; ಇದನ್ನು ಸರ್ಕಾರ ಯಾವ ಉದ್ದೇಶಕ್ಕೆ ಬಳಸಲು ಚಿಂತಿಸಿದೆ ?

## ಸಾರ್ವಜನಿಕ ಉದ್ದಿಮೆಗಳಲ್ಲಿ ಅನುಕಂಪದ ಆಧಾರಿತ ಹುದ್ದೆಗಳ ಬಾಕಿ ಅರ್ಜಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭ (೨೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳು ಎಷ್ಟು, ಅವು ಯಾವುವು ; ಅವುಗಳನ್ನು ಯಾವ ರೀತಿ ವರ್ಗೀಕರಿಸಲಾಗಿದೆ ; (ಆಡಳಿತ ಇಲಾಖಾವಾರು ವಿವರವಾಗಿ ಮಾಹಿತಿ ನೀಡುವುದು)

(ಆ) ಸದರಿ ಸಾರ್ವಜನಿಕ ಉದ್ದಿಮೆಗಳು ದಿನಾಂಕ:೦೧.೦೪.೨೦೦೧ ರಿಂದ ಇಲ್ಲಿಯವರೆಗೂ ಅಂದರೆ ೨೦ ವರ್ಷಗಳ ಕಾಲ ಅನುಕಂಪ ಆಧಾರಿತ ಹುದ್ದೆಗಳನ್ನು ನೇಮಕ ಮಾಡುವ ಸಂಬಂಧ ನಿರ್ಭಂದ ವಿಧಿಸಿರುವುದು ಸರಿಯೇ ; ಈ ರೀತಿ ನಿರ್ಬಂಧಗಳನ್ನು ವಿಧಿಸಲು ಕಾರಣಗಳೇನು; (ವಿವರವಾದ ಮಾಹಿತಿ ನೀಡುವುದು)

(ಇ) ಈ ದಿನಾಂಕದವರೆಗೆ ಅನುಕಂಪ ಆಧಾರದ ಮೇಲೆ ಕೆಲಸ ಕೋರಿ ಬಂದ ಅರ್ಜಿಗಳು ಎಷ್ಟು; ಬಾಕಿ ಇರುವ ಅರ್ಜಿಗಳು ಎಷ್ಟು ; (ವಿವರವಾಗಿ ಮೃತ ನೌಕರನ ಹೆಸರು, ಅರ್ಜಿದಾರರ ಹೆಸರು, ವಿಳಾಸ, ದೂರವಾಣಿ ಸಂಖ್ಯೆ ಹಾಗೂ ಅರ್ಜಿ ಸಲ್ಲಿಸಿದ ದಿನಾಂಕದೊಂದಿಗೆ ನಿಗಮವಾರು ವಿವರವಾದ ಮಾಹಿತಿ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಈ ನಿರ್ಬಂಧವನ್ನು ಸರ್ಕಾರ ರದ್ದುಗೊಳಿಸಿ ನೊಂದ ಕುಟುಂಬಗಳಿಗೆ ನ್ಯಾಯ ದೊರಕಿಸುವುದು ?

## ಸಾರ್ವಜನಿಕ ಉದ್ದಿಮೆಗಳ C.S.R. ಅನುದಾನದ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮ (೨೧೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳೆಷ್ಟು ; ಅವು ಯಾವುವು; ಅವುಗಳನ್ನು ನಿಯಂತ್ರಿಸುವ ಆಡಳಿತ ಇಲಾಖೆಗಳಾವುವು ; (ವಿವರವಾಗಿ ಆಡಳಿತ ಇಲಾಖಾವಾರು ಮಾಹಿತಿ ನೀಡುವುದು)

(ಆ) Corporate Social Responsibility Fund ಅಂದರೇನು; ಇದು ಯಾವ ಉದ್ಯಮಗಳಿಗೆ ಅನ್ವಯಿಸುತ್ತದೆ ಇದರ ಸಂಬಂಧ ಇರುವ ಮಾರ್ಗಸೂಚಿಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕ ಉದ್ದಿಮೆಗಳು Corporate Social Responsibility Fund ನಿಧಿಯಡಿ ಎಷ್ಟು ಹಣವನ್ನು ಕ್ರೋಢೀಕರಿಸಿವೆ ; (ವರ್ಷವಾರು, ಉದ್ದಿಮೆವಾರು ಮಾಹಿತಿ ನೀಡುವುದು)

(ಈ) ಈ ಅನುದಾನದಲ್ಲಿ ಸದರಿ ಉದ್ದಿಮೆಗಳು ಕಳೆದ ೩ ವರ್ಷಗಳಿಂದ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣವನ್ನು ಯಾವ ಏಜೆನ್ಸಿ ಮೂಲಕ ಬಿಡುಗಡೆ ಮಾಡಿದೆ ; (ವರ್ಷವಾರು, ಉದ್ದಿಮೆವಾರು, ಏಜೆನ್ಸಿವಾರು, ಕಾಮಗಾರಿ ವಿವರಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಉ) ಈ ಅನುದಾನವನ್ನು ಯಾವ ಕಾಮಗಾರಿಗಳಿಗೆ ವಿನಿಯೋಗಿಸಬಹುದಾಗಿದೆ ; ಇದರ ಸಂಬಂಧ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳೇನು ?

## ಖರೀದಿ ಏಜೆನ್ಸಿ ಕುರಿತು

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೯ (೨೧೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖರೀದಿ ಏಜೆನ್ಸಿಗಳು (Procurement Agencies) ಎಂದರೇನು; ಅವು ಯಾವುವು ; ಕೃಷಿ ಮಾರಾಟ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಏಜೆನ್ಸಿಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಏಜೆನ್ಸಿಗಳು ಕೃಷಿ ಮಾರಾಟ ಇಲಾಖೆಯ ಆವರ್ತ ನಿಧಿ ಹಾಗೂ ಇತರೆ ನಿಧಿಗಳಿಂದ ಹಣ ಪಡೆಯಲು ಇರುವ ಮಾನದಂಡಗಳೇನು ಹಾಗೂ ಇರುವ ಮಾರ್ಗದರ್ಶಿ ಸೂತ್ರಗಳೇನು; (ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ಎಷ್ಟು ವರ್ಷಗಳಿಂದ ಈ ಏಜೆನ್ಸಿಗಳು ಕೃಷಿ ಮಾರಾಟ ಇಲಾಖೆಯಿಂದ ಆವರ್ತ ನಿಧಿ ಹಾಗೂ ಇತರೆ ನಿಧಿಗಳಿಂದ ಪಡೆದಿರುವ ಹಣವೆಷ್ಟು ; ಹಾಲಿ ಬಾಕಿ ಇರುವ ಹಣವೆಷ್ಟು ; ಹಾಗೂ ಯಾವ ಉದ್ದೇಶಕ್ಕಾಗಿ ಹಣ ಪಡೆಯಲಾಗಿತ್ತು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಮಾರುಕಟ್ಟೆ ಸುಧಾರಣಾ ನಿಧಿಯಿಂದ ಕೃಷಿ ಉತ್ಪನ್ನಗಳ ಅಸೇಸಿಂಗ್ ಕಾರ್ಯಗಳಿಗಾಗಿ ೨೦೧೯-೨೦, ೨೦೨೦-೨೧ರಲ್ಲಿ ಯಾವ ಕಾರ್ಯಕ್ರಮಗಳಿಗಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ ? (ವಿವರವಾಗಿ ಏಜೆನ್ಸಿವಾರು, ಕಾರ್ಯಕ್ರಮವಾರು ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು)

## ರೈತರು ಸಹಕಾರ ಸಂಘಗಳಿಂದ ಪಡೆದ ಸಾಲ ಮನ್ನಾ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೮೦ (೩೦೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರ ರೈತರು ಸಹಕಾರ ಸಂಘಗಳಿಂದ ಪಡೆದ ಸಾಲವನ್ನು ಮನ್ನಾ ಮಾಡಲಾಗಿದೆಯೇ ;

(ಆ) ರೈತರ ಸಾಲ ಮನ್ನಾ ಯೋಜನೆಯ ಮಾನದಂಡಗಳೇನು ; (ವಿವರ ನೀಡುವುದು)

(ಇ) ಯಾವ ಯಾವ ಸಹಕಾರಿ ಸಂಘ ಹಾಗೂ ಬ್ಯಾಂಕ್‌ಗಳಿಂದ ಪಡೆದ ಸಾಲವನ್ನು ಮನ್ನಾ ಮಾಡಲಾಗಿದೆ ;

(ಈ) ತಲಾ ಎಷ್ಟು ಮೊತ್ತದ, ಯಾವ ಅವಧಿಯ ಯಾವ ಸಾಲವನ್ನು ಮನ್ನಾ ಮಾಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಉ) ಸದರಿ ಯೋಜನೆ ಫಲಾನುಭವಿಗಳ ಒಟ್ಟು ಸಂಖ್ಯೆ ಹಾಗೂ ಒಟ್ಟು ಎಷ್ಟು ಮೊತ್ತದ ಸಾಲ ಮನ್ನಾ ಮಾಡಲಾಗಿದೆ ?

## ಕೋವಿಡ್ ನಂತರ ಕೈಗಾರಿಕೆ ಉದ್ಯಮವನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೧ (೨೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್ ನಂತರ ಕೈಗಾರಿಕೆ ಉದ್ಯಮವನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಕೆ.ಐ.ಎ.ಡಿ.ಬಿ. ವತಿಯಿಂದ ಪ್ರಸ್ತುತ ಸಾಲಿನಲ್ಲಿ ಎಷ್ಟು ವಿಸ್ತೀರ್ಣದ ಜಮೀನನ್ನು ಕೈಗಾರಿಕೆ ಉದ್ದೇಶಕ್ಕಾಗಿ ಭೂಸ್ವಾಧೀನಪಡಿಸಿಕೊಂಡಿದೆ;

(ಇ) ಈ ರೀತಿಯಾಗಿ ಭೂ ಸ್ವಾಧೀನಪಡಿಸಿಕೊಂಡ ವಿಸ್ತೀರ್ಣದಲ್ಲಿ ಎಷ್ಟು ಜಮೀನನ್ನು ಕೈಗಾರಿಕೆ ಉದ್ದೇಶಕ್ಕಾಗಿ ನೀಡಲಾಗಿದೆ ; ಇದಕ್ಕೆ ನಿಗದಿಪಡಿಸಿದ ದರವೆಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಕಲಬುರಗಿಯಲ್ಲಿನ ಕಲ್ಲು ಗಣಿಕಾರಿಕೆ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೨ (೨೬೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆ, ಬೇಲೂರು ಗ್ರಾಮದಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಗ್ರಾಮದ ಸರಹದ್ದಿನ ೫೦೦ ಮೀಟರ್ ಅಂತರದಲ್ಲಿ ಡೈನಾಮೆಟ್ ಸ್ಫೋಟ ಮಾಡುತ್ತಿದ್ದು, ಇದರಿಂದ ಗ್ರಾಮದ ಮನೆಗಳು ಹಾನಿಗೊಳಗಾಗಿ ಜನರಿಗೆ ಆರೋಗ್ಯ ಸಮಸ್ಯೆ ಕಾಡುತ್ತಿದ್ದು ಈ ಬಗ್ಗೆ ಜಿಲ್ಲಾಡಳಿತ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಇಲ್ಲಿಯವರೆವಿಗೂ ರಾಜ್ಯದಲ್ಲಿ ಗಣಿಗಾರಿಕೆಗಾಗಿ ಎಷ್ಟು ಪರವಾನಗಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಹಲವಾರು ಕಡೆ ಅಕ್ರಮವಾಗಿ ಗಣಿಗಾರಿಕೆ ನಡೆಯುತ್ತಿದ್ದು, ಈ ರೀತಿಯ ಅಕ್ರಮ ಗಣಿಗಾರಿಕೆಗೆ ಯಾವ ರೀತಿ ಸರ್ಕಾರ ಕ್ರಮ ಕೈಗೊಳ್ಳಲಾಗುತ್ತಿದೆ ? (ವಿವರ ನೀಡುವುದು)

## ಗೃಹ ನಿರ್ಮಾಣದ ಕಾನೂನು ಮತ್ತು ನೀತಿ ನಿಯಮಗಳ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೮೩ (೨೫೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗೃಹ ನಿರ್ಮಾಣ ಸಹಕಾರ ಸಂಘ ಸಂಸ್ಥೆಗಳಿಗೆ ಅನ್ವಯವಾಗುವ ಕಾನೂನು, ನೀತಿ ನಿಯಮಗಳೇನು ;

(ಆ) ಗೃಹ ನಿರ್ಮಾಣ ಸಹಕಾರ ಸಂಘ ಸಂಸ್ಥೆಗಳ ಅವ್ಯವಹಾರಗಳ ನಿಯಂತ್ರಣಕ್ಕೆ ಆಕ್ಟ್‌ನಲ್ಲಿ ನಿಗದಿಸಲ್ಪಟ್ಟ ಪರಿಣಾಮಕಾರಿ ಕಾನೂನು ನಿಯಮಗಳು ಯಾವುವು ; ಅವುಗಳ ಉಲ್ಲಂಘನೆ ಮಾಡಿರುವ ಸಂಘಗಳು ಯಾವುವು ; ಮತ್ತು ಅವುಗಳ ಮೇಲೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ತಾಂಡ ಪ್ರದೇಶಗಳಲ್ಲಿ ನ್ಯಾಯ ಬೆಲೆ ಅಂಗಡಿ ತೆರಯುವ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೪ (೨೫೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ಜನ ವಸತಿ ಪ್ರದೇಶದಿಂದ ದೂರ ಇರುವ ಗ್ರಾಮೀಣ ತಾಂಡ ಪ್ರದೇಶಗಳಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಉದ್ದೇಶಿಸಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ತಾಂಡ ಪ್ರದೇಶಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ತಾಂಡ ಪ್ರದೇಶಗಳಲ್ಲಿ ಪರವಾನಿಗೆ ನೀಡುವ ಒಂದು ನ್ಯಾಯಬೆಲೆ ಅಂಗಡಿಗೆ ಎಷ್ಟು ರೇಷನ್ ಕಾರ್ಡ್‌ಗಳಿಗೆ ಆಹಾರ ಧಾನ್ಯ ಒದಗಿಸಲು ಅವಕಾಶ ಕಲ್ಪಿಸಲಾಗುವುದು ;

(ಇ) ಈ ತಾಂಡ ಪ್ರದೇಶಗಳಲ್ಲಿ ಪರವಾನಿಗೆ ಪಡೆಯಲು ಇರುವ ವಿಶೇಷ ಮಾನದಂಡಗಳೇನು ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ತೋಟಗಾರಿಕೆಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೫ (೨೬೨) ಮಾನ್ಯ ಪೌರಾಡಳಿತ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೨ ವರ್ಷಗಳಿಂದ ತೋಟಗಾರಿಕೆ ಇಲಾಖೆಯ ವತಿಯಿಂದ ಹಮ್ಮಿಕೊಳ್ಳಲಾಗಿರುವ ಕಾರ್ಯಕ್ರಮಗಳಾವುವು ;

(ಆ) ಕಳೆದ ೦೨ ವರ್ಷಗಳಲ್ಲಿ ತೋಟಗಾರಿಕೆ ಅಡಿಯಲ್ಲಿ ಬೆಳೆದ ಬೆಳೆಗಳು ಯಾವುವು ; ಇವುಗಳಿಗೆ ನೀಡಿದ ಸಹಾಯ ಧನವೆಷ್ಟು;

(ಇ) ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳಿಂದ ಸಹಾಯಧನ ಪಡೆದ ಫಲಾನುಭವಿಗಳೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಸಹಕಾರಿ ಬ್ಯಾಂಕುಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ ) :–**

೧೮೬ (೧೧೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಕಾರ ಇಲಾಖೆಯ ಅಧೀನದಲ್ಲಿ ಎಷ್ಟು ವಿಧದ ಸಹಕಾರಿ ಬ್ಯಾಂಕುಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ಸದರಿ ಸಹಕಾರಿ ಬ್ಯಾಂಕುಗಳ ಕಾರ್ಯವ್ಯಾಪ್ತಿ ಏನು ;

(ಇ) ಸದರಿ ಸಹಕಾರಿ ಬ್ಯಾಂಕುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಮತ್ತು ದಿನಗೂಲಿ ನೌಕರರ ಸಂಖ್ಯೆ ಎಷ್ಟು ;

(ಈ) ಅವುಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಯಂ, ಗುತ್ತಿಗೆ ಮತ್ತು ದಿನಗೂಲಿ ನೌಕರರ ಸಂಖ್ಯೆ ಎಷ್ಟು ;

(ಉ) ಪ್ರಸ್ತುತ, ಸದರಿ ಬ್ಯಾಂಕುಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಊ) ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ನೇಮಕ ಮಾಡಲಾಗುವುದು ?

## ಮಹಾನಗರ ಪಾಲಿಕೆಗಳಲ್ಲಿ ಖಾಲಿಯಿರುವ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ ) :–**

೧೮೭ (೧೧೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರಾಭಿವೃದ್ಧಿ ಇಲಾಖೆಯಡಿ ಬೆಳಗಾವಿ ವಿಭಾಗದಲ್ಲಿ ಎಷ್ಟು ಮಹಾನಗರ ಪಾಲಿಕೆಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ಸದರಿ ಮಹಾನಗರ ಪಾಲಿಕೆಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಮಹಾನಗರ ಪಾಲಿಕೆಗಳಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಯಂ, ಗುತ್ತಿಗೆ ಮತ್ತು ದಿನಗೂಲಿ ನೌಕರರ ಸಂಖ್ಯೆ ಎಷ್ಟು ;

(ಈ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಉ) ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ನೇಮಕ ಮಾಡಿಕೊಳ್ಳಲಾಗುವುದು ?

## ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುದಾರರಿಗೆ ದವಸ ಧಾನ್ಯಗಳನ್ನು ನೀಡುವ ಬಗ್ಗೆ

**ಶ್ರೀ ಪ್ರಕಾಶ್. ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೮೮ (೨೫೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

ಅ) ಬಿ.ಪಿ.ಎಲ್. ಹಾಗೂ ಎ.ಪಿ.ಎಲ್ ಕಾರ್ಡ್‌ದಾರರಿಗೆ ಎಷ್ಟು ಪ್ರಮಾಣದಲ್ಲಿ ದವಸ ಧಾನ್ಯಗಳು ಹಾಗೂ ಇನ್ನಿತರ ವಸ್ತುಗಳನ್ನು ವಿತರಿಸಲಾಗಿದೆ;

ಆ) ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು ;

ಇ) ಹಣವಂತರು ಬಿ.ಪಿ.ಎಲ್ ಕಾರ್ಡ್ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳಾವುವು?

## ಮೈಸೂರು ಲ್ಯಾಂಪ್ಸ್ ಸಂಸ್ಥೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೮೯ (೨೪೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಲ್ಯಾಂಪ್ಸ್ ಸಂಸ್ಥೆಯನ್ನು ಮುಚ್ಚಲಾಗಿದೆಯೇ;

(ಆ) ಹಾಗಿದ್ದಲ್ಲಿ, ಸಂಸ್ಥೆಯಲ್ಲಿ ಉಳಿದಿರುವ ಸಿಬ್ಬಂದಿ ಎಷ್ಟು; ಯಾವ ಯಾವ ಸಂಸ್ಥೆಗಳಿಗೆ ನಿಯೋಜನೆ ಮಾಡಲಾಗಿದೆ; ಅಥವಾ ವರ್ಗಾಯಿಸಲಾಗಿದೆ; (ವಿವರ ನೀಡುವುದು)

(ಇ) ಮೈಸೂರು ಲ್ಯಾಂಪ್ಸ್ ಸಂಸ್ಥೆಯಲ್ಲಿ ನೌಕರರು ತಮ್ಮ ಡಿ.ಎ ಹಾಗೂ ಇನ್ನಿತರ ಸೌಲಭ್ಯಗಳನ್ನು ಪಡೆಯದೇ ಸಂಸ್ಥೆ ಉಳಿವಿಗೆಗಾಗಿ ನೀಡಿದ್ದು, ಇವರಿಗೆ ಸರ್ಕಾರದಿಂದ ನೆರವು ನೀಡಲಾಗುವುದೇ;

(ಈ) ಮೈಸೂರು ಲ್ಯಾಂಪ್ಸ್ ಸಂಸ್ಥೆಯ ಒಟ್ಟು ಆಸ್ತಿ ಮೌಲ್ಯ ಎಷ್ಟು; ಈ ಆಸ್ತಿಯನ್ನು ಯಾವ ಸಂಸ್ಥೆಗೆ ಪರಭಾರೆ ಮಾಡಲಾಗಿದೆ; ನೌಕರರು ಹಾಗೂ ಶೇರುದಾರರಿಗೆ ನೀಡಬೇಕಾಗಿರುವ ಹಣದ ಮೊತ್ತ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾಗಿರುವ ಹೊಸ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೦ (೨೫೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾಗಿರುವ ಹೊಸ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಾವುವು;

(ಆ) ಪ್ರತಿಯೊಂದು ಸಂಸ್ಥೆಗಳಿಗೆ ನೀಡಿರುವ ನೆರವು ಹಾಗೂ ಸಿಬ್ಬಂದಿ ಎಷ್ಟು ? (ವಿವರ ಒದಗಿಸುವುದು)

## ಹೊಸ ಗಣಿ ಪ್ರದೇಶಗಳ ಸಂಶೋಧನೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೧ (೨೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗಣಿ ಪ್ರದೇಶಗಳ ಹೊರತಾಗಿ ಹೊಸ ಗಣಿ ಪ್ರದೇಶಗಳ ಸಂಶೋಧನೆ ಹುಡುಕಾಟಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಪ್ರಸ್ತುತ ಸರ್ಕಾರದ ವತಿಯಿಂದ ನಡೆಯುತ್ತಿರುವ ಗಣಿ ಪ್ರದೇಶಗಳಾವುವು; (ಜಿಲ್ಲಾವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಈ ಗಣಿಗಳಿಂದ ಬಂದ ಆದಾಯ ಎಷ್ಟು? (ವಿವರ ನೀಡುವುದು)

## ತೋಟಗಾರಿಕೆಯಲ್ಲಿ ಬೆಳೆಯುವ ಬೆಳೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೯೨ (೨೫೩) ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಯಾವ ಯಾವ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತಿದೆ; ಯಾವ ಯಾವ ತೋಟಗಾರಿಕೆ ಬೆಳೆಗಳಿಗೆ ಬೆಂಬಲ ಬೆಲೆ ನೀಡಲಾಗುತ್ತಿದೆ;

(ಆ) ತೋಟಗಾರಿಕೆ ಇಲಾಖೆಯಿಂದ ಕಳೆದ ವರ್ಷ ನೀಡಿರುವ ಕೃಷಿ ಪರಿಕರ ಹಾಗೂ ಇತರೆ ಸಬ್ಸಿಡಿಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದ N.C.D.E.X ಮತ್ತು ಅನ್ನಭಾಗ್ಯ ಯೋಜನೆ ಕುರಿತು

**ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)**

೧೯೩ (೨೬೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) N.C.D.E.X ಬೆಂಬಲದಿಂದ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿ ಪ್ರತ್ಯೇಕವಾಗಿ ಕೋಶವೊಂದನ್ನು ಸ್ಥಾಪಿಸಲಾಗಿದೆಯೇ; ಹಾಗಿದ್ದಲ್ಲಿ, ಕೋಶದ ಗುರಿ ಮತ್ತು ಉದ್ದೇಶಗಳೇನು; (ವಿವರ ನೀಡುವುದು)

(ಆ) ಅನ್ನಭಾಗ್ಯ ಯೋಜನೆ ಕುರಿತು ಅಧ್ಯಯನ ನಡೆಸಲು ಯಾವುದಾದರೂ ಸಂಸ್ಥೆಗೆ ಸರ್ಕಾರದ ವತಿಯಿಂದ ಕೋರಿಕೆಯನ್ನು ನೀಡಲಾಗಿರುವುದೇ; ಹಾಗಿದ್ದಲ್ಲಿ, ಯಾವ ಸಂಸ್ಥೆಗೆ ಅಧ್ಯಯನ ನಡೆಸಲು ಕೋರಲಾಗಿತ್ತು; ಆ ಸಂಸ್ಥೆ ಅಧ್ಯಯನ ನಡೆಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದೇ;

(ಇ) ಹಾಗಿದ್ದಲ್ಲಿ, ವರದಿಯಲ್ಲಿ ನೀಡಲಾದಂತೆ ಅನ್ನಭಾಗ್ಯ ಯೋಜನೆ ಕುರಿತು ಅನುಕೂಲ ಮತ್ತು ಅನಾನುಕೂಲಗಳೇನು; (ವಿವರ ನೀಡುವುದು)

(ಈ) ಅನ್ನಭಾಗ್ಯ ಯೋಜನೆಯಡಿ ಅಕ್ಕಿ ವಿತರಿಸುವಂತೆ ರಾಗಿ,ಜೋಳ, ಬೆಳೆಕಾಳುಗಳು ಮುಂತಾದ ಆಹಾರ ಸಾಮಾಗ್ರಿಗಳನ್ನು ವಿತರಿಸುವ ಯೋಜನೆ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಗುವುದು;

(ಉ) ಪ್ರಸಕ್ತ ಸಾಲಿನಲ್ಲಿ ಅನ್ನಭಾಗ್ಯಕ್ಕೆ ನೀಡಲಾದ ಅನುದಾನದಲ್ಲಿ ಎಷ್ಟು ಅನುದಾನ ಉಳಿಕೆಯಾಗಿದೆ; ಹಾಗಿದ್ದಲ್ಲಿ, ಬಿ.ಪಿ.ಎಲ್ ಕುಟುಂಬಗಳಿಗೆ ಪಡಿತರ ವಿತರಿಸುವಂತೆ ಎ.ಪಿ.ಎಲ್ ಕುಟುಂಬಗಳಿಗೂ ಸಹ ಪಡಿತರ ವಿತರಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಹಾಗಿದ್ದಲ್ಲಿ, ಯಾವಾಗ ವಿತರಿಸಲಾಗುವುದು;

(ಊ) ಎ.ಪಿ.ಎಲ್ ಕುಟುಂಬದವರಿಗೂ ಪಡಿತರ ವಿತರಿಸುವುದರಿಂದ ಸರ್ಕಾರಕ್ಕೆ ಬೇಕಾಗುವ ಅನುದಾನ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಎಂ.ಸ್ಯಾಂಡ್ ಘಟಕಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)**

೧೯೪ (೨೬೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಎಂ. ಸ್ಯಾಂಡ್ ಘಟಕಗಳು ಎಷ್ಟು; ಈ ಘಟಕಗಳಿಂದ ವರ್ಷಕ್ಕೆ ಎಷ್ಟು ಟನ್ ಎಂ ಸ್ಯಾಂಡ್ ಉತ್ಪಾದನೆಯಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಘಟಕಗಳಲ್ಲಿ ಉತ್ಪಾದನೆಯಾಗುವ ಒಂದು ಟನ್ ಎಂ ಸ್ಯಾಂಡ್‌ಗೆ ಸರ್ಕಾರ ನಿಗದಿಪಡಿಸಿರುವ ದರವೇನು;

(ಇ) ಸರ್ಕಾರವು ಕಳೆದ ೩ ವರ್ಷಗಳಲ್ಲಿ ಎಷ್ಟು ಪ್ರಮಾಣದ ಮರಳನ್ನು ವಿದೇಶಗಳಿಂದ ಆಮದು ಮಾಡಿಕೊಂಡಿದೆ?

## ರಾಜ್ಯದಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಹಣಕಾಸು ಯೋಜನೆಯ ಅಭಿವೃದ್ಧಿ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೯೫ (೨೬೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಮತ್ತು ಅಭಿವೃದ್ಧಿ ಹಣಕಾಸು ಸಂಸ್ಥೆ(ಕೆ. ಯು.ಐ.ಡಿ.ಎಫ್.ಸಿ)ಯಲ್ಲಿ ಚಾಲ್ತಿಯಲ್ಲಿರುವ ಹಾಗೂ ಪ್ರಾರಂಭಿಕ ಹಂತದಲ್ಲಿರುವ ಯೋಜನೆಗಳಿಂದ ಕೈಗೆತ್ತಿಗೊಂಡಿರುವ ಕಾಮಗಾರಿಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಜಿಲ್ಲೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ; ಎಷ್ಟು ಕಾಮಗಾರಿಗಳು ಬಾಕಿ ಇವೆ; ಕಾಮಗಾರಿಗಳಿಗೆ ತಗುಲಿದ ವೆಚ್ಚವೆಷ್ಟು; (ಜಿಲ್ಲಾವಾರು ಗುತ್ತಿಗೆದಾರರ ವಿವರವಾದ ಮಾಹಿತಿ ನೀಡುವುದು)

(ಇ) ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಸರ್ಕಾರದಿಂದ ಹಮ್ಮಿಕೊಂಡಿರುವ ಯೋಜನೆಗಳಾವುವು ಮತ್ತು ಅನುದಾನದ ಮೊತ್ತವೆಷ್ಟು; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ನೀಡುವುದು)

(ಈ) ಕೆ.ಯು.ಐ.ಡಿ.ಎಫ್.ಸಿ.ಯ ವತಿಯಿಂದ ಕರ್ನಾಟಕ ರಾಜ್ಯದ ಆಯ್ದ ಪಟ್ಟಣಗಳಲ್ಲಿ ಪಾರಂಪರಿಕ ಆಧಾರಿತ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆಯೇ; ಹಾಗಿದ್ದಲ್ಲಿ; ಯಾವ ಯಾವ ಪಟ್ಟಣಗಳನ್ನ ಆಯ್ಕೆ ಮಾಡಲಾಗಿದೆ; ಇದಕ್ಕಿರುವ ಮಾನದಂಡಗಳೇನು?(ವಿವರ ನೀಡುವುದು)

## ರಾಜ್ಯದಲ್ಲಿ ಸಹಕಾರ ಇಲಾಖೆಯಲ್ಲಿ ರೈತರಿಗಾಗಿ ಇರುವ ಸಾಲ ಯೋಜನೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೯೬ (೨೬೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳು ಯಾವುವು;(ಈ ಸಾಲ ಯೋಜನೆಗಳ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತದೆ; ಸಬ್ಸಿಡಿಯನ್ನು ಎಷ್ಟು ನೀಡಲಾಗುತ್ತದೆ? (ವಿವರ ನೀಡುವುದು)

## ರಾಜ್ಯದಲ್ಲಿ ಅವಧಿ ಮುಗಿದ ಪಾಲಿಕೆಗಳ ಚುನಾವಣೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೯೭ (೨೨೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಹುಬ್ಬಳ್ಳಿ–ಧಾರವಾಡ ಬೆಳಗಾವಿ, ವಿಜಯಪುರ, ಬಳ್ಳಾರಿ, ಕಲಬುರಗಿ ಮಹಾನಗರ ಪಾಲಿಕೆಗಳಲ್ಲಿ ಸಕಾಲಕ್ಕೆ ಚುನಾವಣೆ ನಡೆಸದೆ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಪ್ರತಿಯೊಂದು ಪಾಲಿಕೆಯ ಅವಧಿ ಮುಗಿದಾಗಲೂ ಸಾರ್ವಜನಿಕರು ಕೋರ್ಟ್ ಮೊರೆ ಹೋಗಿ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವವರೆಗೆ ಕಾಯುವ ಸರ್ಕಾರದ ಈ ವಿಳಂಬ ನೀತಿಗೆ ಕಾರಣಗಳೇನು; ಇದನ್ನು ಸರಿಪಡಿಸಲು ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ವಾರ್ಡ್ ವಿಭಜನೆ, ಮೀಸಲು ನಿಗದಿ ಮತ್ತು ಇನ್ನಿತರೆ ಕಾರ್ಯಗಳನ್ನು ಸರ್ಕಾರವು ತನ್ನ ಸುಪರ್ದಿಯಿಂದ ರಾಜ್ಯ ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಲು ಚಿಂತನೆ ನಡೆಸಿದೆಯೇ? (ವಿವರ ನೀಡುವುದು)

## ಮೈಸೂರು ಮಹಾನಗರ ಪಾಲಿಕೆಯಲ್ಲಿ ನಿಯಮ ಬಾಹಿರ ಪೌರ ಕಾರ್ಮಿಕರ ಸೇವೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೯೮ (೨೨೪) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇತ್ತೀಚೆಗೆ ಮೈಸೂರು ಮಹಾನಗರ ಪಾಲಿಕೆಯಲ್ಲಿ ಸರ್ಕಾರದ ನಿಯಮದಂತೆ ಜನಸಂಖ್ಯೆ ಆಧಾರವಾಗಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವ ಬದಲು ನಿಯಮಗಳನ್ನು ಉಲ್ಲಂಘಿಸಿ ಅಧಿಕ ಪೌರಕಾರ್ಮಿಕರ ಸೇವೆಯನ್ನು ಪಡೆಯಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಆ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಸದರಿ ನಿಯಮಬಾಹಿರ ಕಾರ್ಯದಿಂದ ಅನಗತ್ಯ ದುಂದು ವೆಚ್ಚದಿಂದ ಸರ್ಕಾರದ ಬೊಕ್ಕಸಕ್ಕೆ ಸಾರ್ವಜನಿಕರ ತೆರಿಗೆ ಹಣ ಮತ್ತು ಪಾಲಿಕೆಯ ಸಂಪತ್ತಿಗೆ ಹಾನಿಯಾಗುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಇ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಜನಸಂಖ್ಯೆಗೆ ಅನುಗುಣವಾಗಿ ಪೌರಕಾರ್ಮಿಕರ ಸೇವೆಯನ್ನು ಪಡೆಯುತ್ತಿದ್ದು ಇತರೆ ಮಹಾನಗರ ಪಾಲಿಕೆಗಳು ಈ ರೀತಿಯ ನಿಯಮ ಬಾಹಿರ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳುವುದನ್ನು ನಿರ್ಬಂಧಿಸುವ ಕುರಿತು ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟದ ಕುಸಿತ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೧೯೯ (೨೨೧) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂತರ್ಜಲ ಕುಸಿತದ ಕುರಿತು ಗಣಿ ಮತ್ತು ಭೂವಿಜ್ಞಾನ ಇಲಾಖಾವತಿಯಿಂದ ಯಾವುದಾದರೂ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು)

(ಆ) ಈ ಪ್ರಸ್ತಾಪಿತ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಇ) ಬೆಂಗಳೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವೈಜ್ಞಾನಿಕವಾಗಿ ಅಂತರ್ಜಲ ಮಟ್ಟದ ಸಮೀಕ್ಷೆ ನಡೆಸಲು ಯಾವುದಾದರೂ ವೈಜ್ಞಾನಿಕ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆಯೇ; ಅಥವಾ ಮಾಡಿಕೊಳ್ಳಲು ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಈ) ಅಂತರ್ಜಲ ಕುಸಿತದ ಕಾರಣಗಳನ್ನು ಪತ್ತೆ ಹಚ್ಚುವ ಮತ್ತು ಅದಕ್ಕೆ ಪೂರಕವಾಗಿ ಕ್ರಮ ಕೈಗೊಳ್ಳುವ ನಿಯಮಗಳನ್ನು ಸರ್ಕಾರವು ಜಾರಿಗೊಳಿಸಲಾಗಿದೆಯೇ; ಅಥವಾ ಪ್ರಸ್ತುತ ಪರಿಸ್ಥಿತಿಗೆ ಅನುಗುಣವಾಗಿ ಜಾರಿಯಲ್ಲಿರುವ ನಿಯಮಗಳಿಗೆ ತಿದ್ದುಪಡಿ ತರುವ ಚಿಂತನೆ ನಡೆಸಲಾಗಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಬಿಪಿಎಲ್ ಪಡಿತರ ಚೀಟಿದಾರರ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೦೦ (೨೨೨) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಡಿತರ ಚೀಟಿ ಪಡೆಯಲು ಅರ್ಹ ಬಿಪಿಎಲ್ ಪಡಿತರ ಚೀಟಿದಾರರ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಈ ಅರ್ಹ ಬಿಪಿಎಲ್ ಪಡಿತರ ಚೀಟಿದಾರರ ಕುಟುಂಬಗಳ ಕುರಿತು ಯಾವುದಾದರೂ ಅರ್ಹತೆ/ಅನರ್ಹತೆ ಕುರಿತಾದ ಸಮೀಕ್ಷೆ ನಡೆಸಲಾಗಿದೆಯೇ; ಇಲ್ಲದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಬಿಪಿಎಲ್ ಪಡಿತರ ಚೀಟಿದಾರರ ಪೈಕಿ ಒಟ್ಟು ಸರ್ಕಾರಿ ಅಥವಾ ಸರ್ಕಾರಿ ಅನುದಾನಿತ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವವರು ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಅಕ್ರಮವಾಗಿ ಬಿಪಿಎಲ್ ಪಡಿತರ ಚೀಟಿ ಹೊಂದಿರುವ ಕುಟುಂಬಗಳ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ಮಂಡ್ಯ D.C.C ಬ್ಯಾಂಕಿನಲ್ಲಿನ ಅವ್ಯವಹಾರದ ತನಿಖೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೨೦೧ (೨೩೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ D.C.C ಬ್ಯಾಂಕಿನಲ್ಲಿ ಕೋರ್ ಬ್ಯಾಂಕಿನ ಸಲ್ಯೂಷನ್ ಅಳವಡಿಸಲು ಕಾನೂನು ಬಾಹಿರವಾಗಿ ಗುತ್ತಿಗೆ ನೀಡಿರುವುದು ಮತ್ತು ಇನ್ನಿತರ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಗ್ಗೆ ತನಿಖಾ ತಂಡವು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; (ವರದಿ ಪ್ರತಿ ನೀಡುವುದು)

(ಇ) ಎಷ್ಟು ದೂರುಗಳ ಬಗ್ಗೆ ಆರೋಪ ರುಜುವಾತಾಗಿದೆ;

(ಈ) ರುಜುವಾತಾದ ಆರೋಪದ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ತಿಳಿಸಿ ?

## ಮಂಡ್ಯ ತಾಲ್ಲೂಕು ಬಿ. ಗೌಡಗೆರೆ ಗ್ರಾಮದಲ್ಲಿನ ತೋಟಗಾರಿಕೆ ಇಲಾಖೆಯ ಜಮೀನಿನ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೦೨ (೨೩೬) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ, ಮಂಡ್ಯ ಹಾಗೂ ತಾಲ್ಲೂಕು ಕಸಬಾ ಹೋಬಳಿ ಬೆಳ್ಳೂರು, ಬಿ. ಗೌಡಗೆರೆ ಗ್ರಾಮದ ವ್ಯಾಪ್ತಿಯಲ್ಲಿ ತೋಟಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಎಷ್ಟು ಜಮೀನು ಇದೆ; ಜಮೀನಿನ ವಿಸ್ತೀರ್ಣ ಹಾಗೂ ಸರ್ವೆ ನಂಬರ್ ಎಷ್ಟು; (ವಿವರ ನೀಡುವುದು)

(ಆ) ಆ ಜಮೀನು ಬಿ. ಗೌಡಗೆರೆ ಗ್ರಾಮಕ್ಕೆ ಯಾವ ಉದ್ದೇಶಕ್ಕೆ ಹಾಗೂ ಯಾವಾಗ ಮಂಜೂರಾಗಿದೆ;

(ಇ) ಸದರಿ ಉದ್ದೇಶಕ್ಕೆ ಅನುದಾನ ಬಿಡುಗಡೆಯಾಗಿದೆಯೇ; ಹಾಗಿದ್ದರೆ, ಯಾವ ಕಾಮಗಾರಿ ಹಾಗೂ ಹಣದ ಮೊತ್ತ ಎಷ್ಟು;

(ಈ) ಸದರಿ ಜಮೀನನ್ನು ಸರ್ಕಾರಿ ಶಾಲೆಗೆ ಅಥವಾ ಸಮುದಾಯ ಭವನ ನಿರ್ಮಾಣಕ್ಕೆ ಅವಶ್ಯಕತೆ ಇರುವುದರಿಂದ ಸಂಬಂಧಿಸಿದ ಇಲಾಖೆಗೆ ಹಸ್ತಾಂತರ ಮಾಡುವ ಬಗ್ಗೆ ಸರ್ಕಾರದ ಅಭಿಪ್ರಾಯವೇನು ?

## ಲೇಔಟ್‌ಗಳ ಅನುಮತಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೩ (೨೫೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಲೇಔಟ್‌ಗಳಿಗೆ ಅನುಮತಿ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಿಗಧಿತ ಅವಧಿಯಲ್ಲಿ ಲೇಔಟ್ ಅಭಿವೃದ್ಧಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಭಿವೃದ್ಧಿ ಮಾಡಿರುವ ಲೇಔಟ್‌ಗಳ ಸಂಖ್ಯೆ ಎಷ್ಟು ; ಮತ್ತು ಅಭಿವೃದ್ಧಿ ಮಾಡದಿರುವ ಲೇಔಟ್‌ಗಳ ವಿರುದ್ಧ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಲಬುರಗಿ ಜಿಲ್ಲೆಯಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಲೇಔಟ್‌ಗಳ ಸಂಖ್ಯೆ ಎಷ್ಟು ; ಮತ್ತು ಸದರಿಯವರ ವಿರುದ್ಧ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಸಾಲ ಕೋರಿ ರೈತರು ಸಲ್ಲಿಸಿರುವ ಅರ್ಜಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೦೪ (೨೫೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಲ್ಲಿ ಡಿಸಿಸಿ ಬ್ಯಾಂಕಿಗೆ ಸಾಲ ಕೋರಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ;

(ಆ) ಅವುಗಳಲ್ಲಿ ಎಷ್ಟು ರೈತರಿಗೆ ಸಾಲ ನೀಡಲಾಗಿದೆ ; ಮತ್ತು ಎಷ್ಟು ಸಾಲ ಮಂಜೂರು ಮಾಡಲಾಗಿದೆ ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಸಾಲಮನ್ನಾ ಯೋಜನೆಯಡಿ ಎಷ್ಟು ರೈತರಿಗೆ ಎಷ್ಟು ಮೊತ್ತದ ಸಾಲ ಮನ್ನಾ ಮಾಡಲಾಗಿದೆ ? (ವಿವರ ನೀಡುವುದು)

## ಅಭಿವೃದ್ಧಿ ಪಡಿಸದ ಲೇಔಟ್‌ಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೦೫ (೨೫೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೦೩ ವರ್ಷಗಳಿಂದ ವಸತಿ, ವಾಣಿಜ್ಯ ಮತ್ತು ಕೈಗಾರಿಕೆ ಉದ್ದೇಶಕ್ಕಾಗಿ ವಿನ್ಯಾಸ ಅನುಮೋದನೆಗಾಗಿ ಸ್ವೀಕೃತವಾದ ಅರ್ಜಿಗಳೆಷ್ಟು ; ಅವುಗಳಲ್ಲಿ ಎಷ್ಟು ಅರ್ಜಿಗಳಿಗೆ ವಿನ್ಯಾಸ ಅನುಮೋದನೆ ನೀಡಲಾಗಿರುತ್ತದೆ ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಎಷ್ಟು ಅರ್ಜಿಗಳಿಗೆ ವಿನ್ಯಾಸ ಅನುಮೋದನೆ ನೀಡಲಾಗಿರುತ್ತದೆ ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಪೈಕಿ ವಿನ್ಯಾಸ ಅನುಮೋದನೆ ನೀಡಿದ ನಂತರ ಅಭಿವೃದ್ಧಿ ಪಡಿಸದ ಲೇಔಟ್ ಸಂಖ್ಯೆ ಎಷ್ಟು ; ಅಭಿವೃದ್ಧಿ ಪಡಿಸದ ಲೇಔಟ್‌ಗಳ ವಿರುದ್ಧ ಕೈಗೊಂಡ ಕ್ರಮಗಳೇನು ?

## ಸಾರ್ವಜನಿಕ ಪಡಿತರ ಆಹಾರ ವಿತರಣೆ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೬ (೯೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಸಾರ್ವಜನಿಕ ಪಡಿತರ ಆಹಾರವನ್ನು ವಿತರಿಸಲು ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸಿರುವುದರಿಂದ ವಯೋವೃದ್ಧರ ಹಾಗೂ ಹಿರಿಯ ನಾಗರಿಕರ ಹೆಬ್ಬೆಟ್ಟಿನ ಗುರುತನ್ನು ಬಯೋಮೆಟ್ರಿಕ್ ಯಂತ್ರ ಗುರುತಿಸಲು ಸಾಧ್ಯವಾಗದೇ ಇರುವ ಪ್ರಯುಕ್ತ ಆಹಾರ ವಿತರಿಸಲಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಯೋವೃದ್ಧರು ಹಾಗೂ ಹಿರಿಯ ನಾಗರಿಕರಿಗೆ ಬಯೋಮೆಟ್ರಿಕ್ ಯಂತ್ರದ ಬದಲು ಪರ್ಯಾಯವಾಗಿ ಯಾವ ಮಾರ್ಗಗಳನ್ನು ಅನುಸರಿಸಿ ಆಹಾರ ವಿತರಿಸಲಾಗುವುದು ? (ವಿವರ ಒದಗಿಸುವುದು)

## ಹಸ್ತಚಾಲಿತ ಸ್ಕ್ಯಾವೆಂಜಿಂಗ್ ವೃತ್ತಿ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೭ (೯೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦ರ ಮುಕ್ತಾಯದ ವೇಳೆಗೆ ಹಸ್ತಚಾಲಿತ ಸ್ಕ್ಯಾವೆಂಜಿಂಗ್ (ಜಾಡುಮಾಲಿ ವೃತ್ತಿ) ಅನ್ನು ನಿರ್ಮೂಲನೆ ಮಾಡುವ ಗುರಿಯನ್ನು ಪೂರೈಸಲಾಗುತ್ತಿದೆಯೇ ; ಅಥವಾ ಅದನ್ನು ಮತ್ತಷ್ಟು ಮುಂದೂಡಲಾಗುತ್ತಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಹಸ್ತಚಾಲಿತ ಸ್ಕ್ಯಾವೆಂಜಿಂಗ್‌ನಿಂದಾಗಿ ರಾಜ್ಯದಲ್ಲಿ ಉಂಟಾಗಿರುವ ಸಾವುಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಒದಗಿಸುವುದು) ಹಸ್ತಚಾಲಿತ ಜಾಡುಮಾಲಿ ವೃತ್ತಿಯನ್ನು ತೊಲಗಿಸಲು ಸರ್ಕಾರ ವಿಫಲವಾಗಲು ಬಲವಾದ ಕಾರಣಗಳೇನು ;

(ಇ) ರಾಜ್ಯಾದ್ಯಂತ ಗುರುತಿಸಲಾದ ಹಸ್ತಚಾಲಿತ ಸ್ಕ್ಯಾವೆಂಜರ್‌ಗಳ ಸಂಖ್ಯೆ ಎಷ್ಟು ; ಸಮೀಕ್ಷೆಯ ಮೂಲಕ ಜಿಲ್ಲಾವಾರು ಮತ್ತು ಇಲ್ಲಿಯವರೆಗೆ ಪುರ್ನವಸತಿ ಪಡೆದ ಅಂತಹ ಸ್ಕ್ಯಾವೆಂಜರ್‌ಗಳ ಸಂಖ್ಯೆ ಎಷ್ಟು;

(ಈ) ಕೈಪಿಡಿ ಸ್ಕ್ಯಾವೆಂಜರ್‌ಗಳಾಗಿ ಉದ್ಯೋಗ ನಿಷೇಧ ಮತ್ತು ಅದರ ಪುನರ್ವಸತಿ ಕಾಯ್ದೆ ೨೦೧೩ರ ಅನ್ವಯ ಈ ಕಾಯಿದೆಯ ಅನುಷ್ಠಾನ ಮತ್ತು ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಮತ್ತು ಕೈಗೊಳ್ಳುತ್ತಿರುವ ಕ್ರಮಗಳೇನು?

## ತೋಟಗಾರಿಕಾ ಬೆಳೆಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೦೮ (೨೩೩) ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೋಟಗಾರಿಕಾ ಬೆಳೆ ಕೃಷಿಯಲ್ಲಿರುವ ಒಟ್ಟು ವಿಸ್ತೀರ್ಣ ಎಷ್ಟು; (ಜಿಲ್ಲಾವಾರು ಮತ್ತು ಬೆಳೆವಾರು ವಿವರಗಳನ್ನು ನೀಡುವುದು)

(ಆ) ರಾಜ್ಯದಲ್ಲಿ ಕೋವಿಡ್–೧೯ ಸಾಂಕ್ರಾಮಿಕ ರೋಗ ಹರಡುವಿಕೆ ಸಮಯದಲ್ಲಿ ಕೊಯ್ಲು ಮೊದಲಿಗೆ ಮತ್ತು ಕೊಯ್ಲು ಸಂದರ್ಭದಲ್ಲಿ ನಾಶವಾದ ತೋಟಗಾರಿಕಾ ಬೆಳೆಯ ವಿಸ್ತೀರ್ಣವೆಷ್ಟು;

(ಇ) ಕೋವಿಡ್–೧೯ ಪರಿಹಾರ ಪ್ಯಾಕೇಜ್ ಅಡಿಯಲ್ಲಿ ತೋಟಗಾರಿಕಾ ಬೆಳೆಗಾರರಿಗೆ ವಿವಿಧ ಬೆಳೆಗಳ ಬಾಬ್ತು ಒದಗಿಸಲಾದ ಪರಿಹಾರ ಎಷ್ಟು; (ಮಾಹಿತಿ ನೀಡುವುದು)

(ಈ) ಟಮ್ಯಾಟೊ, ಈರುಳ್ಳಿ ಮತ್ತು ಆಲೂಗಡ್ಡೆ ತರಕಾರಿಗಳು ಪದೇ ಪದೇ ಬೆಲೆಯು ಏರುಪೇರಾಗಿ ನಷ್ಟಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದಕ್ಕೆ ಕಾರಣಗಳೇನು;

(ಉ) ರೈತರಿಗೆ ಸಂಭಾವನೆ ಹಾಗೂ ಗ್ರಾಹಕರಿಗೆ ಕೈಗೆಟುಕುವ ಬೆಲೆಯನ್ನು ಖಾತರಿಪಡಿಸುವ ಉದ್ದೇಶಗಳನ್ನು ಈಡೇರಿಸುವಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ ?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಹೂಡಿದ ಬಂಡವಾಳ ಮತ್ತು ಉದ್ಯೋಗಾವಕಾಶಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೨೦೯ (೨೩೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನೋಂದಣಿಯಾದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಮತ್ತು ಆ ಮೂಲಕ ಹೂಡಲಾದ ಬಂಡವಾಳದ ಪ್ರಮಾಣ ಎಷ್ಟು;

(ಆ) ಆ ಮೂಲಕ ಸೃಷ್ಟಿಸಿದ ಉದ್ಯೋಗಾವಕಾಶಗಳು ಮತ್ತು ಆ ಕುರಿತಾದ ಗುರಿ ಮತ್ತು ಸಾಧನೆಗಳೇನು;

(ಇ) ತುಮಕೂರು ಜಿಲ್ಲೆಯೂ ಸೇರಿದಂತೆ ಯಾವ ಯಾವ ಜಿಲ್ಲೆಗಳಲ್ಲಿ ಸದರಿ ಕೈಗಾರಿಕೆಗಳು ಸ್ಥಾಪಿಸಲ್ಪಟ್ಟಿವೆ;

(ಈ) ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳು ಎಂದು ಗುರುತಿಸಲ್ಪಟ್ಟ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ನೋಂದಣಿ ಮಾಡಿಕೊಳ್ಳುವಲ್ಲಿ ಸರ್ಕಾರದ ಹೆಚ್ಚಿನ ಪ್ರೋತ್ಸಾಹದಾಯಕ ಕ್ರಮಗಳೇನು ?

## ಕಲ್ಲು ಗಣಿಗಾರಿಕೆ ಮತ್ತು ಸಂದಾಯವಾಗುತ್ತಿರುವ ರಾಜಧನ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೨೧೦ (೨೩೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಈವರೆವಿಗೂ ಎಷ್ಟು ಕ್ರಷರ್‌ಗಳಿಗೆ ಕಲ್ಲು ಗಣಿಗಾರಿಕೆ ನಡೆಸಲು ಸರ್ಕಾರ ಅನುಮತಿ ನೀಡಿದೆ; ಆ ಪೈಕಿ ಎಷ್ಟು ಕ್ರಷರ್ (ಜಲ್ಲಿ) ಕಲ್ಲು ಗಣಿಗಾರಿಕೆ ಕಾರ್ಯನಿರ್ವಹಿಸುತ್ತಿವೆ;

(ಆ) ಅವುಗಳ ಪೈಕಿ ಸ್ವಂತ ಜಮೀನಿನಲ್ಲಿ ಮತ್ತು ಸರ್ಕಾರಿ ಜಮೀನಿನಲ್ಲಿ ಗಣಿಗಾರಿಕೆ ನಡೆಸುತ್ತಿರುವ ಸಂಸ್ಥೆಗಳಾವುವು;

(ಇ) ಈ ಕಲ್ಲು ಗಣಿಗಾರಿಕೆಯಿಂದ ಸರ್ಕಾರಕ್ಕೆ ಪ್ರತಿವರ್ಷ ಸಂದಾಯವಾಗುತ್ತಿರುವ ರಾಜಧನವೆಷ್ಟು ? (ಜಿಲ್ಲಾವಾರು ಮತ್ತು ಸಂಸ್ಥೆವಾರು ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ೩–೪ ವರ್ಷಗಳಿಂದ ಸತತವಾಗಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೧ (೨೪೨) ಮಾನ್ಯ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡುಗು ಜಿಲ್ಲೆಯಲ್ಲಿ ಕಳೆದ ಮೂರ್‍ನಾಲ್ಕು ವರ್ಷಗಳಿಂದ ಸತತವಾಗಿ ಕಾಫಿ ಬೆಳೆ ಹಾಳಾಗಿರುವುದರಿಂದ, ಕಾಫಿ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸೂಕ್ತ ಹಾಗೂ ನ್ಯಾಯಸಮ್ಮತ ಬೆಂಬಲ ಬೆಲೆ ನೀಡಿ ಕಾಫಿಯನ್ನು ಖರೀದಿ ಮಾಡುವ ಮೂಲಕ ಕಾಫಿ ಬೆಳೆಗಾರರ ನೆರವಿಗೆ ಸರ್ಕಾರ ಬಂದಿದೆಯೇ;

(ಇ) ಸತತವಾಗಿ ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರಿಗೆ ಆರ್ಥಿಕವಾಗಿ ಅನುಕೂಲವಾಗುವಂತೆ ಸರ್ಕಾರ ರೂಪಿಸುವ ಶಾಶ್ವತ ಪರಿಹಾರ ಕ್ರಮಗಳೇನು; ಹಾಗೂ ಇದುವರೆಗೆ ಕಲ್ಪಿಸಲಾಗಿರುವ ಸೌಲಭ್ಯಗಳಾವುವು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಕೈಗಾರಿಕಾ ವಲಯಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೧೨ (೨೦೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕೈಗಾರಿಕಾ ವಲಯಗಳು ಎಷ್ಟು; ಕೈಗಾರಿಕಾ ವಲಯವನ್ನು ನಿರ್ಮಾಣ ಮಾಡಲು ಇರುವ ಮಾನದಂಡವೇನು; (ವಿವರ ನೀಡುವುದು)

(ಆ) ಕೈಗಾರಿಕಾ ವಲಯಗಳಲ್ಲಿ ಅಗ್ನಿ ಶಾಮಕ ಕೇಂದ್ರ ಇರಬೇಕೆಂಬ ನಿಯಮವಿದೆಯೇ; ಆಗಿದ್ದಲ್ಲಿ, ಎಷ್ಟು ಕೈಗಾರಿಕಾ ವಲಯಗಳಲ್ಲಿ ಅಗ್ನಿ ಶಾಮಕ ಕೇಂದ್ರವನ್ನು ತೆರೆಯಲಾಗಿದೆ; (ಜಿಲ್ಲಾವಾರು ವಿವರವನ್ನು ನೀಡುವುದು)

(ಇ) ಅಗ್ನಿ ಶಾಮಕ ಕೇಂದ್ರವನ್ನು ತೆರೆಯದಿರುವ ಕೈಗಾರಿಕಾ ವಲಯಗಳಲ್ಲಿ ಅಗ್ನಿ ದುರಂತ ಸಂಭವಿಸಿದ್ದಲ್ಲಿ ತಕ್ಷಣ ಅಗ್ನಿ ಅವಘಡ ತಡೆಯಲು ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದೆಯೇ;

(ಈ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) ಹಾಗೂ**

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೧೩ (೨೯+೧೭೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ಉದ್ದಿಮೆಗಳ(ನಿಗಮ/ಮಂಡಳಿಗಳು) ಸಂಖ್ಯೆ ಎಷ್ಟು; ಅದರಲ್ಲಿ ಲಾಭದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು;

(ಆ) ಕಳೆದ ೩ ವರ್ಷಗಳಲ್ಲಿ ಸಾರ್ವಜನಿಕ ಉದ್ದಿಮೆಗಳು ಸಿಎಸ್ಆರ್ ಅಡಿಯಲ್ಲಿ ಕ್ರೋಢೀಕರಿಸಲಾದ ಅನುದಾನ ಎಷ್ಟು; (ಉದ್ದಿಮೆವಾರು ಮಾಹಿತಿ ನೀಡುವುದು)

(ಇ) ಈ ಅನುದಾನದಲ್ಲಿ ಉದ್ದಿಮೆಗಳು ಕಳೆದ ೩ ವರ್ಷಗಳಿಂದ ಯಾವ ಯಾವ ಕಾಮಗಾರಿಗಳಿಗೆ/ಮೂಲ ಸೌಕರ್ಯಗಳಿಗೆ ಅನುದಾನವನ್ನು ಯಾವ ಏಜೆನ್ಸಿ ಮೂಲಕ ಬಿಡುಗಡೆ ಮಾಡಿವೆ (ವರ್ಷವಾರು, ಉದ್ದಿಮೆವಾರು, ಏಜೆನ್ಸಿವಾರು ಕಾಮಗಾರಿಗಳ ವಿವರ ನೀಡುವುದು)

(ಈ) ಸಾರ್ವಜನಿಕ ಉದ್ದಿಮೆಗಳಲ್ಲಿ ನಷ್ಟ ಸಂಭವಿಸಿದಲ್ಲಿ ಅದರಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಬೇರೆ ಇಲಾಖೆಗಳಿಗೆ ವಿಲೀನ ಮಾಡಲಾಗುವುದೇ;

(ಉ) ಈ ಬಗ್ಗೆ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳೇನು?

(ಊ) ನಿಗಮ ಮತ್ತು ಮಂಡಳಿಗಳಲ್ಲಿ ಎಷ್ಟು ವರ್ಷಗಳಿಗೊಮ್ಮೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪುನರ್ ಪರಿಶೀಲಿಸಲಾಗುವುದು?

## ಬಿಡದಿ ಸಮೀಪವಿರುವ ಟೊಯೋಟಾ ಕಿರ್ಲೋಸ್ಕರ್ ಕಂಪನಿ ನೌಕರರ ಮುಷ್ಕರ ಕರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೧೪ (೨೦೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಬಿಡದಿ ಸಮೀಪವಿರುವ ಟೊಯೋಟಾ ಕಿರ್ಲೋಸ್ಕರ್ ಮೋಟಾರ್‌ನ ಆಂತರಿಕ ಕಲಹಗಳಿಗೆ ಕಾರಣಗಳೇನು;

(ಆ) ಆಂತರಿಕ ಕಲಹಗಳಿಂದ ಕಾರ್ಮಿಕರು ಬೀದಿ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನೌಕರರು ತಮ್ಮ ಬೇಡಿಕೆಗಳಿಗೆ ಒತ್ತಾಯಿಸಿ ಅನಿರ್ದಿಷ್ಟಾವಧಿವರೆಗೆ ಮುಷ್ಕರ ನಡೆಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಇದ್ದಲ್ಲಿ, ಇದರ ಪರಿಹಾರಕ್ಕೆ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಾರ್ಖಾನೆಗಳ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೨೧೫ (೨೧೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಕಾರ್ಖಾನೆಗಳ ಸಂಖ್ಯೆ ಎಷ್ಟು; ಈ ಪೈಕಿ ಎಷ್ಟು ಕಾರ್ಖಾನೆಗಳನ್ನು ಗುತ್ತಿಗೆಗೆ ನೀಡಲಾಗಿದೆ;

(ಆ) ಗುತ್ತಿಗೆ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು?

## ಘನತ್ಯಾಜ್ಯ ನಿರ್ವಹಣೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೧೬ (೨೦೪) ಮಾನ್ಯ ಪೌರಾಡಳಿತ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರ ಸಭೆ, ಸ್ಥಳೀಯ ಸಂಸ್ಥೆಗಳಲ್ಲಿ ವೈಜ್ಞಾನಿಕವಾಗಿ ಘನತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದೆಯೇ;

(ಆ) ನಗರ ಸಭೆ, ಸ್ಥಳೀಯ ಸಂಸ್ಥೆಗಳಲ್ಲಿ ಎಷ್ಟು ಪ್ರಮಾಣದ ಘನತ್ಯಾಜ್ಯ ಘಟಕಗಳು ಕಾರ್ಯನಿರ್ವಹಿಸುತ್ತಿವೆ; (ವಿವರ ನೀಡುವುದು)

(ಇ) ಇದಕ್ಕಾಗಿ ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆ ಮಾಡಲಾದ ಅನುದಾನವೆಷ್ಟು; ಈ ಅನುದಾನದಲ್ಲಿ ಬಳಕೆ ಮಾಡಲಾದ ಹಣ ಎಷ್ಟು? (ವಿವರಗಳನ್ನು ನೀಡುವುದು)

## ಸ್ಥಳೀಯ ಸಂಸ್ಥೆಗಳಲ್ಲಿನ ಖಾಲಿ ಹುದ್ದೆಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೨೧೭ (೨೦೫) ಮಾನ್ಯ ಪೌರಾಡಳಿತ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ನಗರ ಸಭೆ, ಪುರ ಸಭೆ ಹಾಗೂ ಪಂಚಾಯಿತಿಗಳ ಮಾಹಿತಿ ನೀಡುವುದು)

(ಆ) ಖಾಲಿ ಇರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ಅನಾನುಕೂಲ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಈ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು?

## ಕಲಬುರಗಿ ನಗರದಲ್ಲಿ ರಿಂಗ್ ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೨೧೮ (೨೪೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ನಗರದ ಎರಡನೇ ರಿಂಗ್ ರಸ್ತೆ ನಿರ್ಮಾಣಕ್ಕಾಗಿ ಜಾಗವನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ;

(ಆ) ಭೂಸ್ವಾಧೀನ ಪಡಿಸಿಕೊಂಡಿದ್ದಲ್ಲಿ ಎಷ್ಟು ಜಾಗವನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸದರಿ ರಿಂಗ್ ರಸ್ತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ನಗರ ಸಭೆ, ಪುರಸಭೆಗಳ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೨೧೯ (೨೪೭) ಮಾನ್ಯ ಪೌರಾಡಳಿತ ಹಾಗೂ ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ನಗರೋತ್ಥಾನ ಯೋಜನೆಯಡಿಯಲ್ಲಿ ನಗರ ಸಭೆ ಮತ್ತು ಇತರೆ ಸ್ಥಳೀಯ ಸಂಸ್ಥೆಗಳಿಗೆ ಎಷ್ಟೆಷ್ಟು ಅನುದಾನವನ್ನು ನೀಡಲಾಗಿದೆ ; (ವಿವರ ನೀಡುವುದು)

(ಆ) ನೀಡಲಾದ ಅನುದಾನದಲ್ಲಿ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮಹಾನಗರ ಪಾಲಿಕೆಗೆ ಮಹಾತ್ಮಗಾಂಧಿ ವಿಕಾಸ ಯೋಜನೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೨೨೦ (೨೪೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮಹಾನಗರ ಪಾಲಿಕೆ "ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ" ಯಡಿ ೨೦೧೯–೨೦ನೇ ಸಾಲಿನಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ; (ವಾರ್ಡ್ ಸಹಿತ ಸಂಪೂರ್ಣ ವಿವರ ನೀಡುವುದು)

(ಇ) ಕೈಗೊಂಡ ಕಾಮಗಾರಿಗಳು ಪೂರ್ಣಗೊಂಡಿವೆಯೇ ? (ಸಂಪೂರ್ಣ ವಿವರ ನೀಡುವುದು)

## ಯು.ಜಿ.ಡಿ. ಮತ್ತು ಕುಡಿಯುವ ನೀರಿನ ಕಾಮಗಾರಿಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೨೧ (೨೪೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ನಗರಗಳಲ್ಲಿ ಯು.ಜಿ.ಡಿ. ಮತ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಕಳೆದ ೩ ವರ್ಷಗಳಲ್ಲಿ ಎಷ್ಟು ಕಾಮಗಾರಿಗಳು ಅನುಷ್ಠಾನಗೊಂಡಿವೆ ; ಎಷ್ಟು ಕಾಮಗಾರಿಗಳು ಮುಕ್ತಾಯಗೊಂಡಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ನಗರಗಳಲ್ಲಿ ಯು.ಜಿ.ಡಿ ಮತ್ತು ಕುಡಿಯುವ ನೀರಿನ ಕಾಮಗಾರಿಗಳಿಗಾಗಿ ಅಗೆದು ಹಾಳು ಮಾಡಲಾದ ರಸ್ತೆಗಳನ್ನು ರಿಪೇರಿ ಮಾಡದಿರಲು ಕಾರಣಗಳೇನು ; ಎಷ್ಟು ನಗರಗಳ ರಸ್ತೆಯನ್ನು ರಿಪೇರಿ ಮಾಡಲಾಗಿದೆ ; ಅದಕ್ಕೆ ತಗಲುವ ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಯು.ಜಿ.ಡಿ. ಮತ್ತು ಕುಡಿಯುವ ನೀರಿನ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆದಿರುವ ಕುರಿತು ಹಾಗೂ ಕಳಪೆ ಕಾಮಗಾರಿಗಳ ಕುರಿತು ಎಷ್ಟು ದೂರುಗಳು ಇದುವರೆಗೆ ದಾಖಲಾಗಿವೆ ?

## ಬೇಬಿ ಬೆಟ್ಟದಲ್ಲಿ ಕಲ್ಲು ಗಣಿಗಾರಿಕೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೨೨ (೨೩೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕು ಬೇಬಿ ಬೆಟ್ಟದಲ್ಲಿ ಕಲ್ಲು ಗಣಿಗಾರಿಕೆ ಮಾಡಲು ಅನುಮತಿ ನೀಡಲಾಗಿದೆಯೇ ; ಎಷ್ಟು ವರ್ಷಗಳಿಂದ ಇಲ್ಲಿ ಕಲ್ಲು ಗಣಿಗಾರಿಕೆ ಮಾಡಲಾಗುತ್ತಿದೆ;

(ಆ) ಸ್ಫೋಟಕ ಸಿಡಿಸಿ ಕಲ್ಲು ಗಣಿಗಾರಿಕೆ ಮಾಡಲು ಯಾವ ಯಾವ ಇಲಾಖೆಯಿಂದ ಅನುಮತಿ ಬೇಕಾಗಿದೆ ; ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕು ಬೇಬಿ ಬೆಟ್ಟದಲ್ಲಿ ಕಲ್ಲು ಗಣಿಗಾರಿಕೆ ಮಾಡಲು ಅನುಮತಿ ನೀಡಲಿಲ್ಲವೆಂದಾದಲ್ಲಿ ಇದುವರೆಗೆ ಎಷ್ಟು ಜನರ ಮೇಲೆ ಕೇಸು ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ ;

(ಇ) ಜಿಲ್ಲಾಡಳಿತದ ಗಮನಕ್ಕೆ ಬಾರದೆ ಕಲ್ಲು ಗಣಿಗಾರಿಕೆ ನಡೆಯಲು ಹೇಗೆ ಸಾಧ್ಯ ; ಅಕ್ರಮ ಗಣಿಗಾರಿಕೆಯೆಂದಾದಲ್ಲಿ ನೇರವಾಗಿ ಕ್ರಮ ಕೈಗೊಳ್ಳಲು ಇರುವ ಸಮಸ್ಯೆಗಳೇನು ?

## ಸಹಕಾರ ಕ್ಷೇತ್ರದಲ್ಲಿ SC, ST ಮೀಸಲಾತಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೨೩ (೨೪೦) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸಹಕಾರ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಮೀಸಲಾತಿ ನೀಡುವ ಕುರಿತು ಸರ್ಕಾರದ ನಿಲುವೇನು;

(ಆ) ರಾಜ್ಯದಲ್ಲಿ ಸಹಕಾರ ಕ್ಷೇತ್ರದಲ್ಲಿ ನಡೆಯುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸಹಕಾರಿ ತತ್ವದಡಿ ನಡೆಯುವ ಸಕ್ಕರೆ ಕಾರ್ಖಾನೆಗಳು ಕಳೆದ ೩ ವರ್ಷಗಳಲ್ಲಿ ಎಷ್ಟು ಮೊತ್ತದ ಲಾಭಾಂಶವನ್ನು ಸದಸ್ಯರಿಗೆ ವಿತರಿಸಿದೆಯೇ ? (ಕಾರ್ಖಾನೆವಾರು ವಿವರ ನೀಡುವುದು)

## ಅನ್ನ ಭಾಗ್ಯ ಯೋಜನೆಯ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೨೨೪ (೨೩೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನ್ನಭಾಗ್ಯ ಯೋಜನೆಯಲ್ಲಿ ಕಳೆದ ೬ ತಿಂಗಳಿನಲ್ಲಿ ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಎ.ಪಿ.ಎಲ್., ಬಿ.ಪಿ.ಎಲ್. ಮತ್ತು ಅಂತ್ಯೋದಯ ಕಾರ್ಡುಗಳಿವೆ ; ಎ.ಪಿ.ಎಲ್., ಬಿ.ಪಿ.ಎಲ್. ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣ ಎಷ್ಟು ; ರಾಜ್ಯದಲ್ಲಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತದೆ ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯ ಬೆಲೆ ಅಂಗಡಿಯ ಮಾಲೀಕರು ವಿತರಿಸದೆ ಬಡವರಿಗೆ ವಿತರಿಸಿದೆಯೆಂದು ಸರ್ಕಾರಕ್ಕೆ ಸುಳ್ಳು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯಾಗಿ ವಂಚಿಸುತ್ತಿರುವ ನ್ಯಾಯ ಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕಳೆದ ೬ ತಿಂಗಳಿನಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ;

(ಈ) ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಸರ್ಕಾರವು ಕಳೆದ ೬ ತಿಂಗಳಿನಲ್ಲಿ ಎಷ್ಟು ವೆಚ್ಚ ಮಾಡಿದೆ ? (ತಿಂಗಳವಾರು ವಿವರ ನೀಡುವುದು)

## ಬಹು ಮಹಡಿ ಕಟ್ಟಡಗಳ ಮಾಲೀಕರ ಸಂಘಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೨೫ (೨೩೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಸಹಕಾರಿ ಕಾನೂನಿನ ಅನ್ವಯ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಬಹು ಮಹಡಿ ಕಟ್ಟಡಗಳ ಮಾಲೀಕರ ಸಂಘಗಳ ನೋಂದಣಿಯಾಗಿದೆ ; (ವಿಭಾಗವಾರು ಮಾಹಿತಿ ನೀಡುವುದು) (Flat owners Association)

(ಆ) ಬಹು ಮಹಡಿ ವಸತಿ ಕಟ್ಟಡಗಳ ಮಾಲೀಕರ ಸಂಘಗಳು ಸಹಕಾರಿ ಕಾಯ್ದೆಯ ಯಾವ ಕಲಂಗಳ ಅನ್ವಯ ನೋಂದಣಿಯಾಗಿದೆ ; (ಸದರಿ ಕಾನೂನಿನ ಕಲಂಗಳ ಪ್ರತಿಯನ್ನು ಒದಗಿಸುವುದು)

(ಇ) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಬಹು ಮಹಡಿ ವಸತಿ ಮಾಲೀಕರ ಸಂಘಗಳನ್ನು ಸಹಕಾರಿ ಕಾಯ್ದೆಯ ಅನ್ವಯ ನೋಂದಣಿ ಮಾಡಬಾರದೆಂದು ಆದೇಶ ನೀಡಿದೆಯೇ ; ಸದರಿ ನ್ಯಾಯಾಲಯದ ಆದೇಶದ ಪ್ರತಿಯನ್ನು ನೀಡುವುದು ;

(ಈ) ಮಾನ್ಯ ನ್ಯಾಯಾಲಯವು ಬಹು ಮಹಡಿ ವಸತಿ ಕಟ್ಟಡಗಳ ಮಾಲೀಕರ ಸಂಘಗಳನ್ನು ಸಹಕಾರಿ ಕಾಯ್ದೆಯ ಅನ್ವಯ ನೋಂದಣಿ ಮಾಡಬಾರದೆಂದು ಆದೇಶ ನೀಡಿದ್ದಲ್ಲಿ ಈಗಾಗಲೇ ನೋಂದಣಿಯಾಗಿರುವ ಬಹು ಮಹಡಿ ವಸತಿ ಕಟ್ಟಡಗಳ ಮಾಲೀಕರ ಸಂಘಗಳ ನೋಂದಣಿಯು ರದ್ದಾಗುವುದೇ ; ಈ ಕುರಿತು ಸರ್ಕಾರದ ನಿಲುವೇನು ?

# ಮೈಸೂರು ರಿಂಗ್ ರಸ್ತೆಯಲ್ಲಿ ದೀಪ ಅಳವಡಿಕೆ ಮತ್ತು ಕಸ ವಿಲೇವಾರಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೨೬ (೨೬೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದ ರಿಂಗ್ ರಸ್ತೆಯಲ್ಲಿ ರಾತ್ರಿ ವೇಳೆ ಬೀದಿ ದೀಪಗಳನ್ನು (ಹೈಮಾಸ್ಟ್/ಸೋಡಿಯಂ ವೇಪರ್/ಎಲ್.ಇ.ಡಿ) ಸರಿಯಾಗಿ ಅಳವಡಿಸದೇ ಇರುವುದರಿಂದ ಕತ್ತಲಿನ ವಾತಾವರಣದಲ್ಲಿ ಸಂಚರಿಸಲು ಸಾರ್ವಜನಿಕರು ಭಯಭೀತರಾಗಿ ತೊಂದರೆಗೆ ಒಳಗಾಗಿರುವುದು ರಿಂಗ್ ರಸ್ತೆಯಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಿಂಗ್ ರಸ್ತೆಯಲ್ಲಿ ವ್ಯವಸ್ಥಿತವಾಗಿ ರಸ್ತೆ ಉದ್ದಕ್ಕೂ ಹಾಗೂ ಹೈಮಾಸ್ಟ್/ ಸೋಡಿಯಂ ವೇಪರ್ ಎಲ್.ಇ.ಡಿ. ಬೀದಿ ದೀಪಗಳನ್ನು ಅಳವಡಿಸಿ ಬೆಳಗಿಸಲು ಕ್ರಮ ಜರುಗಿಸಲಾಗುವುದೇ ;

(ಇ) ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ಸಾರ್ವಜನಿಕರು ಕಟ್ಟಡ ತ್ಯಾಜ್ಯ ಹಾಗೂ ಇತರೆ ತ್ಯಾಜ್ಯವನ್ನು ತಂದು ಸುರಿಯುತ್ತಿದ್ದು, ರಸ್ತೆಯ ಎರಡೂ ಬದಿ ತ್ಯಾಜ್ಯದ ರಾಶಿಗಳಿದ್ದು, ಇವುಗಳನ್ನು ಇಲ್ಲಿಂದ ವಿಲೇವಾರಿ ಮಾಡಲು ಹಾಗೂ ಸಾರ್ವಜನಿಕರು ತ್ಯಾಜ್ಯವನ್ನು ತಂದು ಇಲ್ಲಿ ಸುರಿಯದಂತೆ ಕಟ್ಟಳೆ ಮಾಡಿ ಸಿ.ಸಿ. ಟಿ.ವಿ. ಕ್ಯಾಮೆರಾ ಅಳವಡಿಸಲು ಕ್ರಮ ಜರುಗಿಸಲಾಗುವುದೇ ;

(ಈ) ರಿಂಗ್ ರಸ್ತೆಯ ಎರಡೂ ಬದಿಯಲ್ಲಿ ಸ್ಥಳೀಯ ಆಲ, ಬೇವು, ಸಂಪಿಗೆ, ನೇರಳೆ ಮೊದಲಾದ ಮರಗಿಡಗಳನ್ನು ವ್ಯವಸ್ಥಿತವಾಗಿ ಬೆಳೆಸಲು ಮಧ್ಯದಲ್ಲಿ ಡಿವೈಡರ್ ಜಾಗದಲ್ಲಿ ಹೂವಿನ ಗಿಡಗಳನ್ನು ಬೆಳೆಸಲು ಕ್ರಮ ಜರುಗಿಸಲಾಗುವುದೇ ?

## ಮೈಸೂರು ಮೂಡಾದಿಂದ ನಗರಪಾಲಿಕೆ ಹಸ್ತಾಂತರವಾದ ಬಡಾವಣೆಗಳ ಮೂಲಸೌಲಭ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೨೭ (೨೬೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮಹಾನಗರ ಪಾಲಿಕೆಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮೂಡಾ) ೨೦೧೬–೧೭ರಿಂದ ಈಚೆಗೆ ಹಸ್ತಾಂತರವಾಗಿರುವ ಬಡಾವಣೆಗಳ ಸಂಖ್ಯೆ ಎಷ್ಟು ; ಅವು ಯಾವುವು ಈ ಬಡಾವಣೆಗಳಿಂದ ನಗರಪಾಲಿಕೆಗೆ ಸಂದಾಯವಾಗುತ್ತಿರುವ ಮನೆ/ನಿವೇಶನ/ವಾಣಿಜ್ಯ ಕಟ್ಟಡ ಇತ್ಯಾದಿ ತೆರಿಗೆಗಳ ವಾರ್ಷಿಕ ಪ್ರಮಾಣ ಎಷ್ಟು ; (ವಿವರ ಒದಗಿಸುವುದು)

(ಆ) ಈ ಬಡಾವಣೆಗಳಿಗೆ ರಸ್ತೆ, ತೆರೆದ ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಉದ್ಯಾನವನ ಮೊದಲಾದ ಮೂಲಸೌಲಭ್ಯಗಳನ್ನು ಕಲ್ಪಿಸಿಕೊಡಲು ನಗರಪಾಲಿಕೆ ಕೈಗೊಂಡಿರುವ ಕ್ರಮಗಳು ಯಾವುವು ; ಕಾರ್ಯಗತಗೊಳಿಸಿರುವ ಪ್ರಮುಖ ಯೋಜನೆಗಳು ಯಾವುವು ; (ವಿವರ ನೀಡುವುದು)

(ಇ) ಯಾವ ಯಾವ ಬಡಾವಣೆಗಳಿಗೆ ಇನ್ನೂ ಯಾವ ಯಾವ ಮೂಲ ಸೌಲಭ್ಯಗಳ ಕೊರತೆ ಇದೆ ; ಅವುಗಳನ್ನು ಒದಗಿಸಲು ನಗರಪಾಲಿಕೆ ಕೈಗೊಂಡಿರುವ ಕ್ರಮಗಳು ಯಾವುವು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–126/400 ಪ್ರತಿಗಳು/27–01–2021